ಕ್ರಾಂತಿಯ ಕಿಡಿ

# ಕಾಯಕ ಯೋಗಿ

ಸಂಪಾದಕರು : ಬಿ.ಕೆ. ಅರುಣಜ್ಯೋತಿ

KAYAKAYOGI - Morning Daily

ಕನ್ನಡ ದಿನಪತ್ರಿಕೆ

| ಮಂಡ್ಯ Mandya | ಸಂಪುಟ - 04 Volume - 04 | ಸಂಚಿಕೆ - 82 Issue - 82 | RNI No.KARKAN/2018/77805 POST NO. KA/SK/MND/999/2019-2021 | ಮಂಗಳವಾರ Tuesday | 06-07-2021 | ಪುಟ - 04 Page - 04 | ಬೆಲೆ-ರೂ. 02 Price - 02 | ಸಂಪರ್ಕ 9980605484 | E-mail kayakayoginews@gmail.com |
|---|---|---|---|---|---|---|---|---|---|

askಮೈಸೂರು

ಪರಿಸರ, ಪ್ರವಾಸೋದ್ಯಮ, ಆರೋಗ್ಯ, ವ್ಯವಹಾರ, ಕೃಷಿ, ಶಿಕ್ಷಣ, ಜೀವನ ಶೈಲಿ, ಸಂಸ್ಕೃತಿ, ವನ್ಯಜೀವಿಗಳು, ಸಾಧಕರು, ವ್ಯವಹಾರ ಹಾಗೂ ಉತ್ಪನ್ನಗಳ ಮಾಹಿತಿ, ಸುದ್ದಿ ಮತ್ತು ಜಾಹಿರಾತುಗಳು.

FREE CLASSIFIEDS

Visit: askmysuru.com/news

9742 9742 34 askmysuru

## 'ಸುಮಲತಾರನ್ನು ಕೆಆರ್‌ಎಸ್ ಬಾಗಿಲಿಗೆ ಮಲಗಿಸಬೇಕು'

# ಮಾಜಿ ಸಿಎಂ ಎಚ್‌ಡಿಕೆ ಹೇಳಿಕೆ ವಿರುದ್ಧ ಪ್ರತಿಭಟನೆ

ಮಂಡ್ಯ : ಕೆಆರ್‌ಎಸ್ ಜಲಾಶಯ ಸೋರಿಕೆಯಾಗುತ್ತಿದ್ದರೆ ನೀರು ಹೋಗದಂತೆ ಕೆಆರೆಸ್ ಬಾಗಿಲಲ್ಲಿ ಸಂಸದರನ್ನೇ ಮಲಗಿಸಿಬಿಟ್ಟರೆ ಬಿಗಿಯಾಗುತ್ತದೆ ಎಂದು ಹೇಳಿಕೆ ನೀಡಿರುವ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ವಿರುದ್ಧ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಬೇಲೂರು ಸೋಮಶೇಖರ್ ನೇತೃತ್ವದಲ್ಲಿ ಮಹಿಳೆಯರು ಪ್ರತಿಭಟನೆ ನಡೆಸಿದರು.




ನಗರದ ವಿಶ್ವೇಶ್ವರಯ್ಯ ಪ್ರತಿಮೆ ಎದುರು ಜಮಾಯಿಸಿದ ವಿವಿಧ ಸಂಘಟನೆಯ ಮಹಿಳಾ ಸಂಘಟನೆಯ ಮುಖಂಡರು ಹಾಗೂ ಅಂಬರೀಶ್ ಅಭಿಮಾನಿಗಳು ಎಚ್‌ಡಿಕೆ ಹೇಳಿಕೆ ಖಂಡಿಸಿ ಕ್ಯಾಂಡಲ್ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದರು.

ಜೆಡಿಎಸ್ ಪಕ್ಷದ ಚಿಹ್ನೆ ತೆನೆ ಹೊತ್ತ ಮಹಿಳೆ ಎಂಬುದನ್ನು ಮರೆತಿರುವ ಕುಮಾರಸ್ವಾಮಿಯವರು ಮಹಿಳೆಯರ ಬಗ್ಗೆ ಗೌರವ ಹೊಂದಿಲ್ಲ. ಅವರ ಘನತೆಗೆ ತಕ್ಕಂತೆ ಮಾತನಾಡದೆ ಸಂಸದರ ವಿರುದ್ಧ ಅವಹೇಳಕಾರಿಯಾಗಿ ಮಾತನಾಡಿರುವುದು ಅವರ ರಾಜಕೀಯ ಅಧಃಪತನವನ್ನು ತೋರಿಸುತ್ತದೆ ಎಂದು ಟೀಕಿಸಿದರು.




ಕುಮಾರಸ್ವಾಮಿಯವರ ನಾಲಿಗೆ ಅವರ ವ್ಯಕ್ತಿತ್ವವನ್ನು ತೋರಿಸುತ್ತದೆ. ಜಿಲ್ಲೆಯ ಮಹಿಳೆಯರು ಮತ್ತು ರಾಜ್ಯದ ಸ್ವಾಭಿಮಾನಿ ಜನತೆಯ ಗೌರವಕ್ಕೆ ಧಕ್ಕೆ ಉಂಟು ಮಾಡುವ ಹೇಳಿಕೆ ನೀಡಿರುವುದು ನಾಚಿಕೆಗೇಡಿನ ಸಂಗತಿ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆಯಲ್ಲಿ ನವೀನ್, ಸತೀಶ್, ಕಾರ್ತಿಕ್ ಮತ್ತಿತರರು ಪಾಲ್ಗೊಂಡಿದ್ದರು.

**ಎಚ್‌ಡಿಕೆ ಟೀಕೆ** : ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರನ್ನು ಭೇಟಿಯಾದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಡ್ಯದ ಸಂಸದರು ಕೆಆರ್‌ಎಸ್ ಸೋರುತ್ತಿದ್ದು, ಮಂಡ್ಯ ಜಿಲ್ಲೆಗೆ ಇಂಥ ಸಂಸದರು ಹಿಂದೆ ಸಿಕ್ಕಿಲ್ಲ, ಮುಂದೆಯೂ ಬರುವುದಿಲ್ಲ ಎಂದು ಸಂಸದೆ ಸುಮಲತಾ ಅವರ ಹೆಸರನ್ನು ಪ್ರಸ್ತಾಪಿಸಿದೆ ಟೀಕಿಸಿದರು.

ದಿಶಾ ಸಭೆಯಲ್ಲಿ ಕೆಆರ್‌ಎಸ್ ರಕ್ಷಣೆ ಮಾಡುವ ಪ್ರಸ್ತಾಪ ಮಾಡಿದ್ದಾರೆ. ಕೆಲಸ ಮಾಡಲು ಸರಿಯಾದ ಮಾಹಿತಿ ಇಲ್ಲದೆ ಕಾ ಟಾಚಾರಕ್ಕೆ ವೈಯಕ್ತಿಕ ದ್ವೇಷದ ಹೇಳಿಕೆ ನೀಡಿದರೆ ಬಹಳಷ್ಟು ದಿನ ನಡೆಯುವುದಿಲ್ಲ ಎಂದು ಗರಮ್ಮಾದರು.

ಅನುಕಂಪದಲ್ಲಿ ಸಿಕ್ಕಿರುವ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ಜನರ ಋಣವನ್ನು ತೀರಿಸಬೇಕು. ಇಲ್ಲವೇ ಜನರೇ ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಲಿದ್ದಾರೆ. ಪದೇ ಪದೇ ಅಂತಹ ಅವಕಾಶಗಳು ಸಿಗುವುದಿಲ್ಲ ಎಂದು ಹೇಳಿದರು.

# ಎಸ್.ಎಸ್.ಎಲ್.ಸಿ ಪರೀಕ್ಷೆ ಸಮರ್ಪಕವಾಗಿ ನಿರ್ವಹಿಸಿ

## ಶಿಕ್ಷಣ ಇಲಾಖೆಗೆ ಡಿಸಿ ಸೂಚನೆ



ಮಂಡ್ಯ : ಜುಲೈ 19 ಮತ್ತು 22 ರಂದು ನಡೆಯುವ ಎಸ್.ಎಸ್‌ಎಲ್.ಸಿ ಪರಿಕೇಯನ್ನು ಅತ್ಯಂತ ಯಶಸ್ವಿಯಾಗಿ ನಿರ್ವಹಿಸಿ ಎಂದು ಜಿಲ್ಲಾಧಿಕಾರಿ ಎಸ್. ಅಶ್ವತಿ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಜುಲೈ 2021 ರ ಎಸ್.ಎಸ್.ಎಲ್.ಸಿ ಪರೀಕ್ಷೆಯ ಪೂರ್ವ ಸಿದ್ದತೆಯ ಕುರಿತು ಮಾತನಾಡಿದ ಅವರು ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ಜಿಲ್ಲೆಯ ಒಟ್ಟು 545 ಪ್ರೌಢಶಾಲೆಗಳಿಂದ 11,107 ಗಂಡು ಮಕ್ಕಳು, 9,609 ಹೆಣ್ಣು ಮಕ್ಕಳು ಸೇರಿದಂತೆ ಒಟ್ಟು 20716 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದರು.

100 ರಿಂದ 150 ವಿದ್ಯಾರ್ಥಿಗಳಿಗೆ 01 ಪರೀಕ್ಷಾ ಕೇಂದ್ರ ರಚಿಸಲಾಗಿದ್ದು, ಪ್ರತಿ ಕೊಠಡಿಗೆ ಗರಿಷ್ಠ 12 ವಿದ್ಯಾರ್ಥಿಗಳು, ವಿದ್ಯಾರ್ಥಿಗಳ ನಡುವಿನ ಸಾಮಾಜಿಕ ಅಂತರ 06 ಅಡಿಗಳು ಇರಬೇಕು ಹಾಗೂ ಪ್ರತಿ ವಿದ್ಯಾರ್ಥಿಗೆ ಎನ್-95 ಮಾಸ್ಕ್ ವಿತರಿಸಿ, ಎಲ್ಲಾ ಪರೀಕ್ಷಾ ಕೇಂದ್ರಗಳಿಗೂ ಪರೀಕ್ಷೆಯ ಹಿಂದಿನ ದಿನ ಸ್ಯಾನಿಟೈಸರ್ ವ್ಯವಸ್ಥೆ ಮಾಡಿ ಅಗತ್ಯ ಕ್ರಮವಹಿಸಬೇಕು ಎಂದರು.

ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಒಂದು ಕಾಯ್ದಿರಿಸಿದ ಕೊಠಡಿ ಸ್ಥಾಪನೆ. ಪರೀಕ್ಷಾ ಕರ್ತವ್ಯಕ್ಕೆ ಹಾಜರಾಗುವ ಎಲ್ಲಾ ಸಿಬ್ಬಂದಿಗಳು ಕಡ್ಡಾಯವಾಗಿ 01 ಡೋಸ್ ವ್ಯಾಕ್ಸಿನೇಷನ್ ಪಡೆದಿರಬೇಕು ಎಂದರು.

ಪ್ರತಿ ತಾಲ್ಲೂಕು ಕೇಂದ್ರದಲ್ಲಿ ಕೋವಿಡ್ ಕೇರ್ ಸೆಂಟರ್ ಗುರುತಿಸಲಾಗಿದ್ದು, ಒಂದು ವೇಳೆ ಯಾವುದಾದರು ವಿದ್ಯಾರ್ಥಿಗೆ ಪರೀಕ್ಷಾ ಸಂದರ್ಭದಲ್ಲಿ ಪಾಸಿಟೀವ್ ಬಂದಲ್ಲಿ ಸದರಿ ಕೋವಿಡ್ ಕೇರ್ ಸೆಂಟರ್‌ನಲ್ಲಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗುವುದು ಎಂದರು.

ಜಿಲ್ಲೆಯಾದ್ಯಂತ ಒಟ್ಟು 157 ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾಗಿದೆ. ಪ್ರತಿ ಪರೀಕ್ಷಾ ಕೇಂದ್ರಕ್ಕೂ ಮುಖ್ಯ ಅಧೀಕ್ಷಕರನ್ನು ನೇಮಕ ಮಾಡಿದ್ದು 300ಕ್ಕೂ ಹೆಚ್ಚು ವಿದ್ಯಾರ್ಥಿಗಳಿರುವ ಪರೀಕ್ಷಾ ಕೇಂದ್ರದಲ್ಲಿ ಹೆಚ್ಚುವರಿಯಾಗಿ ಒಬ್ಬರು ಉಪಮುಖ್ಯ ಅಧೀಕ್ಷಕರನ್ನು ನೇಮಕ ಮಾಡಿ ಮಂಡಳಿಯ ನಿರ್ದೇಶಕರಿಂದ ಅನುಮೋದನೆ ಪಡೆಯಲಾಗಿದೆ ಎಂದರು.

ಈ ಬಾರಿ ಪ್ರಶ್ನೆಪತ್ರಿಕೆಯನ್ನು ಸಂರಕ್ಷಿಸಿಡಲು ಕಸ್ಟೋಡಿಯನ್‌ರವರನ್ನು ನೇಮಕ ಮಾಡಲಾಗಿದೆ. ಪ್ರತಿ ಪರೀಕ್ಷಾ ಕೇಂದ್ರಕ್ಕೂ ಸಾಮಾಜಿಕ ಅಂತರ ಮೇಲ್ವಿಚಾರಣೆಗಾಗಿ ಓರ್ವ ದೈಹಿಕ ಶಿಕ್ಷಕರನ್ನು ನಿಯೋಜಿಸಲಾಗಿದೆ ಎಂದರು.

ಜಿಲ್ಲೆಯ ಎಲ್ಲಾ 157 ಪರೀಕ್ಷಾ ಕೇಂದ್ರಗಳಿಗೂ ಮೊಬೈಲ್ ಸ್ವಾಧೀನಾಧಿಕಾರಿಗಳನ್ನು ನೇಮಕ ಮಾಡಲಾಗಿದ್ದು, ಇವರು ತಪಾಸಣೆ ಮಾಡಿ ಪರೀಕ್ಷಾ ಕಾರ್ಯದಲ್ಲಿ ಭಾಗಿಯಾಗುವ ಎಲ್ಲಾ ಸಿಬ್ಬಂದಿಗಳ ಮೊಬೈಲ್‌ಗಳನ್ನು ಪಡೆದುಕೊಳ್ಳುವಂತೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಶೈಲಜಾ, ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ದಿವ್ಯಪ್ರಭು, ಅಪರ ಪೊಲೀಸ್ ವರಿಷ್ಠಾಧಿಕಾರಿ ಧನಂಜಯ್, ಡಿಡಿಪಿಐ ಆರ್.ರಘುನಂದನ್, ಶಿಕ್ಷಣಾಧಿಕಾರಿ ಚಂದ್ರಶೇಖರ್, ನಗರಸಭಾ ಆಯುಕ್ತರಾದ ಎಸ್.ಲೋಕೇಶ್, ಡಯಟ್ ಕಾಲೇಜ್ ಪ್ರಾಂಶುಪಲರಾದ ಶಿವಮಾದಪ್ಪ, ಆರ್.ಸಿ.ಎಚ್.ಅಧಿಕಾರಿ ಸೋಮಶೇಖರ್, ಕೇತ್ರ ಶಿಕ್ಷಣಾಧಿಕಾರಿಗಳಾದ ಚಂದ್ರಕಾಂತ, ಮಹಾದೇವ್, ಕಾಳಿರಯ್ಯ ಹಾಗೂ ಮತ್ತಿತರರ ಉಪಸ್ಥಿತರಿದ್ದರು.

# ಪ್ರಿಯಕರನೊಂದಿಗೆ ಸೇರಿ ಪತಿಯ ಕೊಲೆ

ಮಂಡ್ಯ: ಉಪ ಪ್ರಾಂಶುಪಾಲರೊಬ್ಬರ ಸಾವಿನ ಪ್ರಕರಣದ ರಹಸ್ಯವನ್ನು ಬೆನ್ನತ್ತಿದ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದು, ಅಕ್ರಮ ಸಂಬಂಧಕ್ಕೆ ಅಡ್ಡಿಯಾದ ಹಿನ್ನೆಲೆಯಲ್ಲಿ ಪತ್ನಿಯೇ ಪ್ರಿಯಕರನೊಂದಿಗೆ ಸೇರಿ ಪತಿಯನ್ನು ಕೊಲೆ ಮಾಡಿರುವ ಘಟನೆ ಬೆಳಕಿಗೆ ಬಂದಿದೆ.

ನಗರದ ಗುತ್ತಲು ರಸ್ತೆಯ ನಿವಾಸಿ, ತಗ್ಗಹಳ್ಳಿ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪ ಪ್ರಾಂಶುಪಾಲ ಅಲ್ತಾಫ್ ಮೆಹದಿ ಅವರ ಸಾವಿನ ರಹಸ್ಯ ಭೇದಿಸುವಲ್ಲಿ ನಗರದ ಪೂರ್ವ ಠಾಣೆಯ ಪೊಲೀಸರು ಯಶಸ್ವಿಯಾಗಿದ್ದಾರೆ. ಪತ್ನಿಯೇ ತನ್ನ ಪ್ರಿಯಕರನ ಜತೆಗೂಡಿ ಉಸಿರುಗಟ್ಟಿಸಿ ಕೊಲೆ ಮಾಡಿರುವ ವಿಷಯ ತನಿಖೆಯಿಂದ ತಿಳಿದು ಬಂದಿದೆ.

ಜೂ.29ರಂದು ನಗರದ ಗುತ್ತಲು ರಸ್ತೆಯ ಸಫ್ದರಿಯಾ ಮಸೀದಿ ಬಳಿ ಅಲ್ತಾಫ್ ಮೆಹದಿ ಶವ ಅನುಮಾನಾಸ್ಪದವಾಗಿ ಸಿಕ್ಕಿತ್ತು.

ರಾತ್ರಿ ಶೌಚಾಲಯಕ್ಕೆ ಹೊರಗಡೆ ಬಂದ ಸಂದರ್ಭದಲ್ಲಿ ಹೃದಯಾ ಘಾತದಿಂದ ಮೃತಪಟ್ಟಿದ್ದಾರೆ ಎಂದು ಪತ್ನಿ ರಿಜ್ವಾನಾ ಬೇಗಂ ತಿಳಿಸಿದ್ದರು. ಆದರೆ ಮೃತದೇಹದ ಮೇಲೆ ಗಾಯದ ಗುರುತುಗಳಿದ್ದರಿಂದ ಕುಟುಂಬಸ್ಥರು ಕೊಲೆ ಶಂಕೆ ವ್ಯಕ್ತಪಡಿಸಿದ್ದರು. ನಗರದ ಪೂರ್ವ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪ್ರಕರಣದ ಬೆನ್ನು ಹತ್ತಿದ ಪೊಲೀಸರು ಕರೆ ವಿವರಗಳ ಮಾಹಿತಿ ಆಧರಿಸಿ ತನಿಖೆ ಪ್ರಾರಂಭಿಸಿದರು. ಈ ಸಂದರ್ಭದಲ್ಲಿ ರಿಜ್ವಾನಾ ಬೇಗಂ ಅವರೊಂದಿಗೆ ದಾವಣಗೆರೆ ಜಿಲ್ಲೆಯ ರೆಹಮತ್ ಉಲ್ಲಾನೊಂದಿಗೆ ಅಕ್ರಮ ಸಂಬಂಧ ಇರುವ ವಿಷಯ ಬೆಳಕಿಗೆ ಬಂದಿದೆ.

ವಿಚಾರಣೆ ನಡೆಸಿದಾಗ ಉಸಿರುಗಟ್ಟಿಸಿ ಕೊಲೆ ಮಾಡಿರುವುದಾಗಿ ತಪ್ಪೊಪ್ಪಿಕೊಂಡಿದ್ದು, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಪೂರ್ವ ಪೊಲೀಸ್ ಠಾಣೆ ಎಸ್‌ಐ ವೈ.ಎನ್.ರವಿಕುಮಾರ್ ತಿಳಿಸಿದರು.

## ಅಸಂಘಟಿತ ಕಾರ್ಮಿಕರಿಗೆ ಸಹಾಯಧನ

ಮಂಡ್ಯ : ಲಾಕ್‌ಡೌನ್ ಹಿನ್ನಲೆಯಲ್ಲಿ ದೈನಂದಿನ ಉದ್ಯೋಗವನ್ನು ನಡೆಸಲಾಗದೆ ಆದಾಯವನ್ನು ಕಳೆದುಕೊಂಡಿರುವ 11 ವರ್ಗಗಳ ಅಸಂಘಟಿತ ಕಾರ್ಮಿಕರಿಗೆ 2000 ರೂ ಗಳಂತೆ ಸಹಾಯಧನವನ್ನು ನೀಡಲು ಅಗತ್ಯ ದಾಖಲಾತಿಗಳೊಂದಿ ಅರ್ಜಿ ಅಹ್ವಾನಿಸಲಾಗಿದೆ.

ಅಸಂಘಟಿತ ಕಾರ್ಮಿಕರಾದ ಅಗಸರು, ಕ್ಷೌರಿಕರು, ಗೃಹಕಾರ್ಮಿಕರು, ಮೆಕಾನಿಕ್, ಚಿಂದಿ ಆಯುವವರು, ಹಮಾಲರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು ಹಾಗೂ ಭಟ್ಟಿ ಕಾರ್ಮಿಕ ವೃತ್ತಿಯಲ್ಲಿ ತೊಡಗಿರುವವರು ಅರ್ಹರಾಗಿದ್ದು, ಉದ್ಯೋಗ ದೃಢೀಕರಣ ಪ್ರಮಾಣ ಪತ್ರದೊಂದಿಗೆ ಁಣಣಠಿ:// ,ಜಡಿತುಭಿಜಂಟಿಟುಟಿಜ.ರಂತ.ಎಟಿ/ಇಚಿಡಿಟಿಚಿಣಚಿಇಚಿ/ ಪೋರ್ಟಲ್‌ನಲ್ಲಿ ಜುಲೈ 31 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಾರ್ಮಿಕ ಸಹಾಯವಾಣಿ ಸಂಖ್ಯೆ 155214 ಗೆ ಸಂಪರ್ಕಿಸಬಹುದೆಂದು ಮಂಡ್ಯ ಜಿಲ್ಲೆಯ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ಅವಘಡ : ಸಮುದಾಯಭವನಕ್ಕೆ ಬೆಂಕಿ



ಕೆ.ಆರ್.ಪೇಟೆ : ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಉಂಟಾಗಿ ಬೆಂಕಿಹೊತ್ತಿಕೊಂಡ ಪರಿಣಾಮ ಸಮುದಾಯ ಭವನವೊಂದರ ಅಡುಗೆ ಪಾತ್ರೆಗಳು, ಶಾಮಿಯಾನ, ಡೆಕೊರೇಷನ್ ಸಾಮಗ್ರಿಗಳು, ಮೈಕ್‌ಸೆಟ್‌ಗಳು ಇನ್ನಿತರ ಲಕ್ಷಾಂತರ ಬೆಲೆ ಬಾಳುವ ವಸ್ತುಗಳು ಸುಟ್ಟು ಕರಕಲಾಗಿರುವ ಘಟನೆ ತಾಲ್ಲೂಕಿನ ಚಂದಗೋನಹಳ್ಳಿಯಮ್ಮ ದೇವಸ್ಥಾನದ ಕ್ಷೇತ್ರದಲ್ಲಿರುವ ಶ್ರೀ ಕಾಲಭೈರವೇಶ್ವರ ಸಮುದಾಯ ಭವನದಲ್ಲಿ ನಡೆದಿದೆ.

ಸಮುದಾಯ ಭವನದ ಮಾಲೀಕ ಬೀರುವಳ್ಳಿ ಯೋಗೇಶ್‌ಗೌಡ ಅವರಿಗೆ ಸೇರಿದ ಸಮುದಾಯ ಭವನದಲ್ಲಿ ಈ ವಿದ್ಯುತ್ ಅವಗಡ ನಡೆದಿದ್ದು, ಸುಮಾರು 10ಲಕ್ಷ ರೂಪಾಯಿಗಳಿಗೆ ಹೆಚ್ಚು ನಷ್ಟ ಉಂಟಾಗಿದೆ. ಕಳೆದ 2 ತಿಂಗಳಿಗೂ ಹೆಚ್ಚು ಅವಧಿಯಿಂದ ಲಾಕ್‌ಡೌನ್ ಜಾರಿಯಾಗಿದ್ದ ಕಾರಣ ಯಾವುದೇ ಶುಭ ಸಮಾರಂಭಗಳು ನಡೆಯದೇ ತುಂಬಾ ಸಂಕಷ್ಟಕ್ಕೆ ಸಿಲುಕಿದ್ದ ಸಮುದಾಯ ಭವನದ ಮಾಲೀಕರಿಗೆ ವಿದ್ಯುತ್ ಅವಗಡದಿಂದ ಸಮುದಾಯ ಭವನದ ಅಗತ್ಯ ವಸ್ತುಗಳೆಲ್ಲಾ ಸುಟ್ಟು ಹೋಗಿದ್ದು ಗಾಯದ ಮೇಲೆ ಬರೆ ಎಳೆದಂತಾಗಿದೆ.

ಬೀರುವಳ್ಳಿ ಗ್ರಾಮದ ನಿವಾಸಿಯಾದ ಯೋಗೇಶ್ ಗೌಡ ಅವರು ತಾಲೂಕಿನ ಶ್ರೀ ಚಂದಗೋನಳಮ್ಮ ದೇವಸ್ಥಾನದ ಶ್ರೀ ಕ್ಷೇತ್ರದಲ್ಲಿ ಬ್ಯಾಂಕಿನಿಂದ ಲಕ್ಷಾಂತರ ರೂ ಸಾಲ ಮಾಡಿ ಶ್ರೀ ಕಾಲಭೈರವೇಶ್ವರ ಸಮುದಾಯ ಭವನವನ್ನು ನಿರ್ಮಿಸಿಕೊಂಡು ಸಾಲದ ಕಂತು ತುಂಬುತ್ತಿದ್ದರು. ಅಲ್ಲದೆ ಖಾಸಗಿ ಸಾಲಕ್ಕೆ ಬಡ್ಡಿ ಕಟ್ಟುತ್ತಿದ್ದರು. ಆದರೆ ಎರಡು ತಿಂಗಳಿನಿಂದ ಕೋವಿಡ್ ಲಾಕ್‌ಡೌನ್ ಹಿನ್ನೆಲೆಯಲ್ಲಿ ಸಮುದಾಯ ಭವನವನ್ನು ಬಂದ್ ಮಾಡಲಾಗಿತ್ತು. ಆದರೆ ಭಾನುವಾರ ರಾತ್ರಿ ಸುರಿದ ಧಾರಾಕಾರ ಮಳೆಯಿಂದ ಆಕಸ್ಮಿಕವಾಗಿ ಶಾರ್ಟ್ ಸರ್ಕ್ಯೂಟ್ ಉಂಟಾಗಿ ಬೆಂಕಿಯ ಕೆನ್ನಾಲಿಗೆಗೆ ಸುಮಾರು 10ಲಕ್ಷಕ್ಕೂ ಹೆಚ್ಚು ಬೆಲೆಬಾಳುವ ಸಮುದಾಯ ಭವನಕ್ಕೆ ಸೇರಿದ ಅಡುಗೆ ಪಾತ್ರೆ. ಶಾಮಿಯಾನ. ಯುಪಿಎಸ್, ಡೆಕೊರೇಷನ್ ಸಾಮಗ್ರಿಗಳು ಸೇರಿದಂತೆ ಬೆಲೆ ಬಾಳುವ ಸಮುದಾಯ ಭವನದ ಉಪಕರಣಗಳು ಸುಟ್ಟು ಕರಕಲಾಗಿವೆ.

ಘಟನಾ ಸ್ಥಳಕ್ಕೆ ಕೆ.ಆರ್.ಪೇಟೆ ಗ್ರಾಮಾಂತರ ಪೊಲೀಸ್ ಠಾಣೆಯ ಅಧಿಕಾರಿಗಳು ಹಾಗೂ ಚೆಸ್ಕಾಂ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಮಾಜಿ ಸದಸ್ಯರಾದ ನಿಂಗೇಗೌಡ, ಸ್ಥಳ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಸಮುದಾಯ ಭವನದ ಮಾಲೀಕರಾದ ಯೋಗೇಶ್ ಗೌಡ. ನವೀನ್‌ಕುಮಾರ್ ಉಪಸ್ಥಿತರಿದ್ದರು.

# ಶಾಸಕರ ಹಸಿರೀಕರಣ ಆಶಯವನ್ನು ಬೆಂಬಲಿಸೋಣ : ಸಂಸದೆ

ಮಂಡ್ಯ : ಹಸಿರೀಕರಣ ಮಾಡುವ ಸದುದ್ದೇಶದಿಂದ ಪಣ ತೊಟ್ಟಿರುವ ಶಾಸಕರ ಆಶಯವನ್ನು ಎಲ್ಲರೂ ಬೆಂಬಲಿಸಿ ಶ್ರಮಿಸೋಣ ಎಂದು ಸಂಸದೆ ಸುಮಲತಾ ಅಂಬರೀಶ್ ನುಡಿದರು.



ಮಂಡ್ಯ ತಾಲೂಕಿನ ಬಸರಾಳು ಗ್ರಾಮದಲ್ಲಿರುವ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಲ್ಲಿ ನಡೆದ ವನಮಹೋತ್ಸವ ಸಮಾರಂಭದಲ್ಲಿ ನಮಾತನಾಡಿದ ಅವರು ಬಸರಾಳು ಗ್ರಾಮವನ್ನು ಶಾಸಕರು ದತ್ತು ಪಡೆದು ಸರ್ವತೋಮುಖ ಅಭಿವೃದ್ಧಿ ಮಾಡುವ ಹಂಬಲಕ್ಕೆ ನಮ್ಮ ನೆರವು ಇದೆ ಎಂದರು.

ಬಳಿಕ 100 ಸಸಿ ನೆಟ್ಟು, ಬಸರಾಳು ವ್ಯಾಪ್ತಿಯ ನಿವಾಸಿಗಳಿಗೆ 600 ಸಸ್ಯಗಳನ್ನು ವಿತರಣೆ ಮಾಡಿ ಮಾತನಾಡಿದ ಶಾಸಕ ಎಂ.ಶ್ರೀನಿವಾಸ್, ಸಮಗ್ರ ಅಭಿವೃದ್ದಿಯೊಂದಿಗೆ ಹಸಿರು ಗ್ರಾಮವನ್ನಾಗಿ ಮಾಡುವುದೇ ನಮ್ಮ ಧ್ಯೇಯವಾಗಿದೆ ಎಂದರು.

ಬಸರಾಳು ಗ್ರಾಮವು ಸಂಸದರ ಆದರ್ಶ ಗ್ರಾಮಾಭಿವೃದ್ಧಿ ಯೋಜನೆಗಳಲ್ಲಿ ಒಂದಾಗಿ ಅಭಿವೃದ್ಧಿಗೆ ಸೇರ್ಪಡೆಗೊಂಡಿದೆ, ನಾವು ಕೂಡ ದತ್ತು ಗ್ರಾಮವನ್ನಾಗಿ ಪಡೆದು ಸರ್ವತೋಮುಖ ಅಭಿವೃದ್ಧಿಗೆ ಸಂಕಲ್ಪಮಾಡಿ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದು ನುಡಿದರು.

ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆ ಪ್ರತಿಯೊಬ್ಬ ನಾಗರೀಕರು ತಮ್ಮ ತಮ್ಮ ಜವಾಬ್ದಾರಿ ಹೊತ್ತು ಪರಿಸರ ಸಂರಕ್ಷಣೆ ಮಾಡಬೇಕು ಸಂಸದರಾದ ಸುಮಲತಾರವರು ಸಂಸದರು ಈ ಗ್ರಾಮವನ್ನು ಆದರ್ಶ ಗ್ರಾಮ ವನ್ನಾಗಿ ಅಯ್ಕೆ ಮಾಡಿಕೂಂಡಿರುವುದು ಶ್ಲಾಘನೀಯ ಎಂದರು.

ಮುಂದಿನ ದಿನಗಳಲ್ಲಿ ಈ ಗ್ರಾಮವನ್ನು ಹಸಿರು ಗ್ರಾಮವನ್ನಾಗಿ ಮಾಡುವ ಗುರಿ ಹೊಂದಿದ್ದು ಈ ಕಾರ್ಯಕ್ಕೆ ನಮಗೆ ಸಂಪೂರ್ಣ ಸಹಕಾರವನ್ನು ನೀಡಲು ಸಾಮಾಜಿಕ ಅರಣ್ಯ ವಿಭಾಗ ಹಾಗೂ ಅನನ್ಯ ಹಾರ್ಟ್ ಸಂಸ್ಥೆಯ ಅನುಪಮ ಅವರು ಸದಾ ನಮ್ಮ ಜೊತೆಗೆ ಸಹಕಾರ ನೀಡುತ್ತಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಪ ಅರಣ್ಯ ಸಂರಕ್ಷಣೆ ಅಧಿಕಾರಿ ವೆಂಕಟೇಶ್, ರವಿಶಂಕರ್, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿ.ಧನಂಜಯ್, ಜಿಲ್ಲಾ ಹೆಚ್ಚುವರಿ ಅರಣ್ಯ ಅಧಿಕಾರಿ ನಾಗರಾಜು, ತಾಲೂಕು ಅರಣ್ಯ ಸಂರಕ್ಷಣೆ ಅಧಿಕಾರಿ ಶಿಲ್ಪಾ, ಜ್ಯೋತಿ, ಬೆಟ್ಟಪ್ಪ, ನೆಹರು ಯುವಕೇಂದ್ರದ ಲೆಕ್ಕಾಧಿಕಾರಿ ಬಸವರಾಜು, ರೋಟರಿ ಅಧ್ಯಕ್ಷ ಬರ್ನಾದಪ್ಪ, ಅನನ್ಯ ಸಂಸ್ಥೆ ಅಧ್ಯಕ್ಷೆ ಅನುಪಮಾ, ವಸಂತ, ವಿಶ್ವಜ್ಞಾನಿ ಸಂಸ್ಥೆ ಅಧ್ಯಕ್ಷ ತಾಳಶಾಸನ ಮೋಹನ್, ಬಸವರಾಜು, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಲಹೆಗಾರ ತಿಮ್ಮರಾಜು, ಮೋಹನ್, ಪ್ರದೀಪ್, ಸಿದ್ದೇಗೌಡ, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು ಭಾಗವಹಿಸಿದ್ದರು.

## ವಿ.ರಾಮ್ ಪ್ರಸಾತ್ ಮನೋಹರ್ ಅಧಿಕಾರ ಸ್ವೀಕಾರ

ಮಂಡ್ಯ. : ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿಗಳಾಗಿ ಐ.ಎ.ಎಎಸ್ ಅಧಿಕಾರಿ ಡಾ. ವಿ.ರಾಮ್ ಪ್ರಸಾತ್ ಮನೋಹರ್ ಅಧಿಕಾರ ಸ್ವೀಕರಿಸಿದರು.

ಇಂದು ಜಿಲ್ಲಾಪಂಚಾಯತಿಯಲ್ಲಿ ಅಧಿಕಾರ ಸ್ವೀಕರಿಸಿ ಮಾತನಾಡಿದ ಅವರು, ಸಾರ್ವಜನಿಕ ಕಾರ್ಯಕ್ರಮಗಳನ್ನು ಅನುಷ್ಟಾನಕ್ಕೆ ತರುವ ನಿಟ್ಟಿನಲ್ಲಿ ಮೊದಲು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯಾಗಿ ಸರ್ಕಾರದ ಮಟ್ಟದಲ್ಲಿ ಸಹಕಾರ ಮಾಡುವುದಕ್ಕೆ ಎಲ್ಲಾ ರೀತಿಯಲ್ಲಿಯೂ ಕ್ರಮವಹಿಸಲಾಗುವುದು ಎಂದರು.

ಹಲವು ರಾಜ್ಯ ಹಾಗೂ ಜಿಲ್ಲಾ ಮಟ್ಟದ ಕಾರ್ಯಕ್ರಮಗಳನ್ನು ಅನುಷ್ಟಾನ ಮಾಡುವಲ್ಲಿ ತರಬಹುದಾದ ಸುಧಾರಣೆಗಳು ಹಾಗೂ ಜಿಲ್ಲೆಯಲ್ಲಿ ಸಾಮಾಜಿಕವಾಗಿ, ಆರ್ಥಿಕವಾಗಿ ಹಿಂದುಳಿದಿರುವವರಿಗೆ ಯಾವ ರೀತಿಯಲ್ಲಿ ಕಾರ್ಯಕ್ರಮಗಳನ್ನು ಅನುಷ್ಟಾನಕ್ಕೆ ತರಬಹುದೆಂಬ ಜವಾಬ್ದಾರಿಗಳನ್ನು ಜಿಲ್ಲಾ ಪಂಚಾಯತ್ ಅಧಿನಿಯಮದಲ್ಲಿ ಅಚ್ಚುಕಟ್ಟಾಗಿ ನಿರ್ವಹಿಸಲು ನಿಮ್ಮೆಲ್ಲರ ಸಲಹೆ ಸೂಚನೆಗಳಂತೆ ಸ್ವೀಕರಿಸುತ್ತೇನೆ. ಜಿಲ್ಲಾ ಮಟ್ಟದ ಅಧಿಕಾರಿಗಳು, ಜಿಲ್ಲಾಧಿಕಾರಿಗಳು ಹಾಗೂ ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ಸಮನ್ವಯವಾಗಿ ಕಾರ್ಯನಿರ್ವಹಿಸಲು ಸಿದ್ಧನಿದ್ದೇನೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಎನ್.ಡಿ ಪ್ರಕಾಶ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ತಾ.ಪಂ.-ಜಿ.ಪಂ. ಚುನಾವಣೆಯಲ್ಲಿ ಬಿಎಸ್ಪಿ ಅಧ್ಯರ್ಥಿಗಳು ಸ್ಪರ್ಧೆ

ಮಂಡ್ಯ : ಪ್ರಸ್ತುತ ನಡೆಯುವ ತಾ.ಪಂ.-ಜಿ.ಪಂ. ಸಾರ್ವತ್ರಿಕ ಚುನಾವಣೆಯಲ್ಲಿ ಬಿಎಸ್ಪಿ ಅಧ್ಯರ್ಥಿಗಳು ಸ್ಪರ್ಧಿಸಲಿದ್ದಾರೆ ಎಂದು ಬಿಎಸ್ಪಿ ರಾಜ್ಯಾಧ್ಯಕ್ಷ ಎಂ.ಕೃಷ್ಣಮೂರ್ತಿ ಹೇಳಿದರು.

ನಗರದಲ್ಲಿರುವ ಬಹುಜನ ಸಮಾಜ ಪಕ್ಷದ ಜಿಲ್ಲಾ ಕಚೇರಿಯಲ್ಲಿ ಆಯೋಜಿಸಿದ್ದ ತಾ.ಪಂ.-ಜಿ.ಪಂ. ಸಾರ್ವತ್ರಿಕ ಚುನಾವಣೆಗೆ ಪೂರ್ವಭಾವಿಸಿದ್ದತೆ ಮತ್ತು ತಾಲೂಕು ಅಧ್ಯಕ್ಷರ ಮತ್ತು ಕಾರ್ಯಕರ್ತರ ಅಭಿಪ್ರಾಯ ಸಂಗ್ರಹ ಸಭೆ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯಾದ್ಯಂತ ನಡೆಯುವ ತಾಲೂಕು ಮತ್ತು ಜಿಲ್ಲಾ ಪಂಚಾಯಿತಿ ಸಾರ್ವತ್ರಿಕ ಚುನಾವಣೆಯಲ್ಲಿ ಬಹುಜನ ಸಮಾಜ ಪಕ್ಷದಿಂದ ಅಭ್ಯರ್ಥಿಗಳು ಕಣದಲ್ಲಿದ್ದು, ಚುನಾವಣೆಯನ್ನು ಸ್ವಾಭಿಮಾನದಿಂದ ಎದುರಿಸಲಿದ್ದಾರೆ, ಕಾರ್ಯಕರ್ತರು ಈಗಿನಿಂದಲೇ ಸನ್ನದ್ದರಾಗಿ ಕಾರ್ಯಪ್ರವೃತ್ತರಾಗಬೇಕು ಎಂದು ತಿಳಿಸಿದರು.

ಕೇಂದ್ರ ಮತ್ತು ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಬಿಜೆಪಿ ಸರ್ಕಾರಗಳು ದಿನನಿತ್ಯ ಜನರಿಗೆ ಬೆಲೆ ಏರಿಕೆ ನಿಯಂತ್ರಿಸದೆ, ಸಾಂಕ್ರಮಿಕ ರೋಗಗಳನ್ನು ಆಹ್ವಾನಿಸಿ ಅಪಾರ ಪ್ರಮಾಣದಲ್ಲಿ ಸಾವು ನೋವು ತಂದು ಬಲಿ ಪಡೆಯುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೇಂದ್ರ ಮತ್ತು ರಾಜ್ಯದಲ್ಲಿನ ವಿರೋಧ ಪಕ್ಷಗಳಾದ ಕಾಂಗ್ರೆಸ್, ಜೆಡಿಎಸ್ ಪಕ್ಷಗಳು ಬೇಜವಬ್ದಾರಿತನ ವರ್ತಿಸುತ್ತಿವೆ, ಇನ್ನೂ 2 ವರ್ಷ ವಿಧಾನಸಭೆ ಚುನಾವಣೆ ಇದೆ, ಅಲ್ಲಿನಕ ಸುಮ್ಮನಿರುವುದು ಸರಿ ಎಂದು ಭಾವಿಸಿ ದುರಾಡಳಿತ ನಡಸುತ್ತಿರುವ ಸರ್ಕಾರದ ವಿರುದ್ಧ ಮೌನವಾಗಿವೆ, ತಮ್ಮ ಪಕ್ಷಗಳಲ್ಲಿ ಮುಖ್ಯಮಂತ್ರಿಯಾರಾಗಬೇಕೆನ್ನುವ ಚೆರ್ಚೆಯಲ್ಲಿ ತಲೀನರಾಗಿದ್ದಾರೆ ಎಂದು ಕಿಡಿಕಾರಿದರು.

ಕಾರ್ಯಕ್ರಮದಲ್ಲಿ ಬಹುಜನ ಸಮಾಜ ಪಕ್ಷದ ಜಿಲ್ಲಾಧ್ಯಕ್ಷ ವಕೀಲ ಶಿವಶಂಕರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆರಗೋಡು ಅನಿಲ್‌ಕುಮಾರ್, ಜಿಲ್ಲಾ ಉಸ್ತುವಾರಿ, ಚಲುವರಾಜ್, ಜಿಲ್ಲಾ ಸಂಯೋಜಕ ಮಹದೇವು, ಜಿಲ್ಲಾ ಕಾರ್ಯದರ್ಶಿ ಕೆ.ಆರ್.ಪೇಟೆ ತಾಲೂಕು ಅಧ್ಯಕ್ಷ ಪ್ರದೀಪ್ ಕುಮಾರ್, ನಾಗಮಂಗಲ ತಾಲೂಕು ಅಧ್ಯಕ್ಷ ಚಂದ್ರ, ಮದ್ದೂರು ತಾಲೂಕು ಅಧ್ಯಕ್ಷ ಬೋರಯ್ಯ ಮತ್ತಿತರರು ಪಾಲ್ಗೊಂಡಿದ್ದರು.

ಕ್ರಾಂತಿಯಕಿಡಿ
ಕಾಯಕಯೋಗಿ
KAYAKAYOGI-MORNING DAILY
ಕನ್ನಡ ದಿನಪತ್ರಿಕೆ
ಮಂಗಳವಾರ
06 ಜುಲೈ 2021

## ಮಾದಪ್ಪನ ದರ್ಶನಕ್ಕೆ ಅವಕಾಶ: ಜಯವಿಭವಸ್ವಾಮಿ

ಚಾಮರಾಜನಗರ : ಜಿಲ್ಲೆಯ ಪ್ರಸಿದ್ಧ ಯಾತ್ರಾ ಸ್ಥಳವಾದ ಹನೂರು ತಾಲ್ಲೂಕಿನ ಶ್ರೀ ಮಲೆಮಹದೇಶ್ವಸ್ವಾಮಿಯ ದರ್ಶನಕ್ಕೆ ಇಂದಿನಿಂದ (ಸೋಮವಾರ) ಸರ್ಕಾರದ ನಿರ್ದೇಶನದಂತೆ ಅವಕಾಶ ಕಲ್ಪಿಸಲಾಗಿದೆ ಎಂದು ಶ್ರೀ ಮಲೆಮಹದೇಶ್ವರ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಜಯವಿಭವಸ್ವಾಮಿ ಅವರು ತಿಳಿಸಿದ್ದಾರೆ.

ಸರ್ಕಾರದ ಕೋವಿಡ್ ಮಾರ್ಗಸೂಚನೆಯಂತೆ ಸೋಮವಾ ರದಿಂದ ದೇವರ ದರ್ಶನಕ್ಕೆ ಬೆಳಿಗ್ಗೆ 6 ರಿಂದ ಸಂಜೆ 6 ರವರೆಗೆ ಮಾತ್ರ ಭಕ್ತಾದಿಗಳಿಗೆ ಅವಕಾಶವಿದ್ದು ದಾಸೋಹ, ಲಾಡು ವಿತರಣೆ,ತೀರ್ಥ ಪ್ರಸಾದ ಸೇವೆಗಳು ಇರುವುದಿಲ್ಲ, ರಾತ್ರಿ ತಂಗಲು ಸಹ ಅವಕಾಶ ಕಲ್ಪಿಸಿಲ್ಲ ಎಂದು ಅವರು ತಿಳಿಸಿದ್ದಾರೆ.

ಭಕ್ತಾದಿಗಳು ಕೊರೊನಾ ಸುರಕ್ಷತಾ ಕ್ರಮಗಳನ್ನು ಅನುಸರಿಸುವಂತೆ ಮನವಿ ಮಾಡಲಾಗಿದೆ.



# ಅಕ್ಷರ ದಾಸೋಹದ ನಡಿಗೆ ಮಕ್ಕಳ ಮನೆಮನೆ ಕಡೆಗೆ

ವರದಿ : ವಿಶ್ವನಾಥ ಬಿ.ಆರ್

ಚಾಮರಾಜನಗರ : ಜಿಲ್ಲೆಯ ಗುಂಡ್ಲು ಪೇಟೆ ತಾಲ್ಲೂಕಿನ ಕಾಡಂಚಿನಲ್ಲಿರುವ ಪರಿಸರ ಮಿತ್ರ ಪ್ರಶಸ್ತಿ ಪಡೆದ ಹೊಂಗಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಗೆ ಸೋಮವಾರದಂದು ಎತ್ತಿನಗಾಡಿಗಳ ಮೂಲಕ ಶಾಲಾ ವತಿಯಿಂದ ಬೇಳೆ ಹಾಗೂ ಬೆಲ್ಲವನ್ನು ವಿತರಿಸಲಾಯಿತು.

ಶಾಲೆಯ ಮುಂಭಾಗ ಎತ್ತಿನಗಾಡಿಗಳನ್ನು ಶೃಂಗರಿಸಿ, ಕೊರೊನಾ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಗ್ರಾಮದ ಮನೆ-ಮನೆಗಳಿಗೆ ವಿತರಿಸಿದ್ದು ವಿಶೇಷವಾಗಿತ್ತು.


ಶಾಲೆಯ ಮುಖ್ಯ ಶಿಕ್ಷಕ ಮಹದೇಶ್ವರ ಸ್ವಾಮಿ ಬಿ. ಅವರು ಎಸ್ ಡಿಎಂಸಿ ಅವರ ಸಹಕಾರ ಪಡೆದು ಕೋವಿಡ್ ಹಿನ್ನೆಲೆಯಲ್ಲಿ ಸರ್ಕಾರದ ಬಿಸಿಯೂಟ ಯೋಜನೆಯ ಬೇಳೆ ಹಾಗೂ ದಾನಿಗಳು ನೀಡಿದ ಬೆಲ್ಲವನ್ನು ಅಕ್ಷರ ದಾಸೋಹದ ನಡಿಗೆ ಮಕ್ಕಳ ಮನೆಮನೆ ಕಡೆಗೆ ಎಂಬ ಘೋಷ ವಾಕ್ಯದಂತೆ ಎತ್ತಿನ ಗಾಡಿಗಳ ಮೂಲಕ ಶಾಲಾ ಶಿಕ್ಷಕರು ಹಾಗೂ ಎಸ್ ಡಿಎಂಸಿ ಸದಸ್ಯರು ಒಂದೇ ರೀತಿಯ ಸಮವಸ್ತ್ರ ಧರಿಸಿ ಮನೆಮನೆಗೆ ತೆರಳಿ ತಲುಪಿಸಿದರು.

ಈ ಹಿಂದೆಯೂ ಸಹ ಎರಡು ಬಾರಿ ಆಹಾರ ಧಾನ್ಯಗಳನ್ನು ಎತ್ತಿನಗಾಡಿ ಮೂಲಕ ವಿತರಿಸಿ ಈ ಶಾಲೆ ಗಮನ ಸೆಳೆದಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಮಹದೇಶ್ವರಸ್ವಾಮಿ ಅವರು ಸರ್ಕಾರದದಿಂದ ನೀಡಲಾದ 132 ದಿನದ ಬೇಳೆಯನ್ನು ನಿಗದಿತ ಪ್ರಮಾಣದಲ್ಲಿ 1ರಿಂದ 7 ನೇ ತರಗತಿಯ 111 ಮಕ್ಕಳಿಗೆ ವಿತರಿಸಿದ್ದು ಇಂದು ದಾನಿಗಳ ಸಹಕಾರದಿಂದ ಪ್ರತಿ ಮಕ್ಕಳಿಗೆ ತಲಾ 10 ಬೆಲ್ಲವನ್ನು ಸಹ ವಿತರಿಸಿ ಕೊರೊನಾ ಸಂಕ



ಷ್ಟದ ಸಮಯದಲ್ಲಿ ನೆರವಾಗಿದ್ದೇವೆ ಎಂದರು. ಈ ಸಂದರ್ಭದಲ್ಲಿ ಶಾಲಾ ಎಸ್.ಡಿ.ಎಂ.ಸಿ ಅಧ್ಯಕ್ಷ ಮಾದಪ್ಪ,ಉಪಾಧ್ಯಕ್ಷ ಸುಬ್ಬಪ್ಪ,ಸದಸ್ಯರಾದ ಸ್ವಾಮಿ, ಗುರು ಸ್ವಾಮಿ,ಮಂಜಪ್ಪ,ಸಹ ಶಿಕ್ಷಕರಾದ ಪ್ರಭಾಕರ, ವಿನೋದ ಹಾಜರಿದ್ದರು.



## ಚಾ.ನಗರದಲ್ಲಿ ಡೆಲ್ಟಾ ಪ್ಲೆಸ್ ಆತಂಕ: ಪ್ರತಿ ವಾಹನಗಳ ತಪಾಸಣೆ

ಚಾಮರಾಜನಗರ : ಚಾಮರಾಜನಗರದ ಜಿಲ್ಲೆ ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಅರಣ್ಯ ಪ್ರದೇಶದ ಮೂಲೆಹೊಳೆ ಗಡಿ ಭಾಗದಿಂದ ಕೇರಳ ರಾಜ್ಯಕ್ಕೆ ಸಂಚಾರವಿದ್ದು, ಕೆಕ್ಕನಹಳ್ಳ ಗಡಿ ಭಾಗದಿಂದ ತಮಿಳುನಾಡಿಗೆ ಸಂಚಾರವಿದೆ. ಈ ಗಡಿ ಭಾಗಗಳಲ್ಲಿ ಕೊರೊನಾ ಕಟ್ಟೆಚ್ಚರ ಕೈ ಗೊಳ್ಳಲಾಗಿತ್ತು. ಇದೀಗ ಡೆಲ್ಟಾ ಪ್ಲಸ್ ಮುನ್ನೆಚ್ಚರಿಕೆ ಕ್ರಮವಾಗಿ ತಪಾಸಣೆ ಕೈಗೊಳ್ಳಲಾಗಿದೆ.

ನೆರೆ ರಾಜ್ಯಗಳಾದ ತಮಿಳುನಾಡು ಹಾಗೂ ಕೇರಳದಿಂದ ಆಗಮಿಸುವವರಿಗೆ ಕಡ್ಡಾಯವಾಗಿ ಆರ್ .ಟಿ.ಪಿ.ಸಿ.ಆರ್ ಇದ್ದವರಿಗೆ ಮಾತ್ರ ಪ್ರವೇಶ ಕಲ್ಪಿಸಲಾಗಿದೆ. ಇಂದಿನಿಂದ ರಾಜ್ಯದಲ್ಲಿ ಸಂಚಾರ ಮುಕ್ತವಾಗಿರುವ ಹಿನ್ನೆಲೆಯಲ್ಲಿ ಸಂಚಾರವು ಎಂದಿನಂತೆ ಸಾಗುತ್ತಿದೆ. ಸೋಂಕು ಹರಡುವ ಭೀತಿ ಇರುವ ಕಾರಣ ಮುನ್ನೆಚ್ಚರಿಕೆ ಕ್ರಮ ಕೈ ಗೊಂಡಿರುವ ಅರಣ್ಯ ಇಲಾಖೆ ಹಾಗೂ ಆರೋಗ್ಯ ಇಲಾಖೆಯು ಪ್ರತಿ ವಾಹನಗಳ ತಪಾಸಣೆಯಲ್ಲಿ ತೊಡಗಿದ್ದಾರೆ.

## ಭಕ್ತರ ದರ್ಶನಕ್ಕೆ ಸಜ್ಜುಗೊಂಡ ಚೆಲುವನಾರಾಯಣಸ್ವಾಮಿ ದೇಗುಲ



ಮೇಲುಕೋಟೆ : ಕಲ್ಯಾಣಿ ಪರಿಸರ, ಮೆಟ್ಟಿಲುಗಳು, ಅಕ್ಕ-ತಂಗಿ ಕೊಳ, ದೇವಾಲಯದ ಮುಂಭಾಗ ಬೆಳೆದಿದ್ದ ಗಿಡಗಂಟಿಗಳನ್ನು ಚೆಲುವನಾರಾಯಣ ಸ್ವಾಮಿ ದೇವಾಲಯದ ಸಿಬ್ಬಂದಿಗಳು ಸ್ವಚ್ಛಗೊಳಿಸಿದರು. ಇದರ ಬೆನ್ನಲ್ಲೇ ಚೆಲುವ ನಾರಾಯಣಸ್ವಾಮಿ ಮತ್ತು ಸಮೂಹ ದೇಗುಲ ಗಳು ಭಕ್ತರ ದರ್ಶನಕ್ಕೆ ಸಜ್ಜುಗೊಂಡಿವೆ.

ಮಳೆಗಾಲದಲ್ಲಿ ಬೆಳೆಯುವ ಗಿಡಗಂಟೆಗಳು ಪರಿಸರ ಸ್ವಚ್ಛತೆಗೆ ಧಕ್ಕೆ ತರುತ್ತಿದ್ದರೂ ಈ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಗಳು ತಲೆ ಕೆಡಿಸಿಕೊಳ್ಳುತ್ತಿರಲಿಲ್ಲ. ಸ್ವಚ್ಛತೆಗಾಗಿ ಭಕ್ತರು ಮತ್ತು ಮಾಧ್ಯಮಗಳ ಒತ್ತಡ ಬಂದಾಗ ಗ್ರಾಮ ಪಂಚಾಯಿತಿಗೆ ಪತ್ರ ಬರೆದು ಸುಮ್ಮನಾಗುತ್ತಿದ್ದರು. ಆದರೆ ಕಳೆದ ವರ್ಷ ಮೇಲುಕೋಟೆ ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಯಾಗಿ ಸೇವೆಗೆ ಬಂದ ಮಂಗಳಮ್ಮ ದೇಗುಲದ ಆಧಾಯ ಹೆಚ್ಚಳ ಮತ್ತು ಸ್ವಚ್ಛತೆಗೆ ಹೆಚ್ಚು ಒತ್ತು ನೀಡಿ ಕೆಲಸ ಮಾಡುತ್ತಿದ್ದಾರೆ. ಈ ಪರಿಣಾಮ ತಮ್ಮ ಸಿಬ್ಬಂದಿಯನ್ನು ಪ್ರೇರೇಪಿಸಿ ಮಳೆಗಾಲದ ವೇಳೆ ಮೇಲು ಕೋಟೆಯ ಸ್ಮಾರಕಗಳು ಮತ್ತು ದೇವಾ ಲಯದ ಪರಿಸರವನ್ನು ಸ್ವಚ್ಛಗೊಳಿಸುವ ಸಂಪ್ರದಾಯ ಆರಂಭಿಸಿದ್ದಾರೆ.

ನಾಲ್ಕು ದಿನಗಳ ಕಾಲ ನಡೆದ ಸ್ವಚ್ಛತಾ ಕಾರ್ಯದಲ್ಲಿ ದೇವಾಲಯದ ಶ್ರೀಪಾದದವರು, ಬಂಡೀಕಾರರು, ಕಾವಲುಗಾರರು, ಕಚೇರಿ ಸಿಬ್ಬಂದಿ ಸೇರಿದಂತೆ 25ಕ್ಕೂ ಹೆಚ್ಚು ಸಿಬ್ಬಂದಿ ಭಾಗಿ ಯಾಗಿದ್ದರು. ದೇವಾಲಯ, ಬೆಟ್ಟದ ಆವರಣ ಮತ್ತು ಕಲ್ಯಾಣಿ, ದನುಷ್ಕೋಟಿ, ಅಕ್ಕತಂಗಿಕೊಳ, ಅರಮನೆತೋಟ, ದೇವಾ ಲಯದ ಮುಂಭಾಗ ಹಾಗೂ ಸ್ಮಾರಕಗಳ ಪರಿಸರವನ್ನು ಸ್ವಚ್ಛಮಾಡಲಾಗಿದ್ದು, ಈ ಪ್ರವಾಸಿ ತಾಣಗಳನ್ನು ನಿರಂತರವಾಗಿ ಸ್ವಚ್ಛ ವಾಗಿಡಲು ನಮ್ಮೊಂದಿಗೆ ನಾಗರೀಕರು, ಯುವ ಕರು, ಭಕ್ತರು ಹಾಗೂ ಸಂಘ ಸಂಸ್ಥೆಗಳು ಸಹ ಸಹಕಾರ ನೀಡಬೇಕು ಎಂದು ದೇಗುಲದ ಇಒ ಮಂಗಳಮ್ಮ ಮನವಿ ಮಾಡಿದ್ದು, ಪ್ರತಿನಿತ್ಯ ಸಾವಿರಾರು ಸಂಖ್ಯೆಯಲ್ಲಿ ಮೇಲುಕೋಟೆಗೆ ಬರುವ ಭಕ್ತರು ಕ್ಷೇತ್ರದ ಸ್ವಚ್ಛತೆಕಾಪಾಡಬೇಕು ಎಂದಿದ್ದಾರೆ.

ದೇವಾಲಯ ಇಂದಿನಿಂದ ಆರಂಭವಾಗಿದ್ದು ಕೋವಿಡ್ ನಿಯಮ ಅನುಸರಿಸಿ ಭಕ್ತರು ದೇವಾಲಯ ಪ್ರವೇಶಿಸಿ ಸಾಮಾಜಿಕ ಅಂತರ ಕಾಯ್ದುಕೊಂಡು ಚೆಲುವನಾರಾಯಣಸ್ವಾಮಿಯ ದರ್ಶನ ಪಡೆಯಬ ಹುದು. ಆದರೆ ಸರ್ಕಾರದ ಆದೇಶದಂತೆ ಯಾವುದೇ ಸೇವಾ ಪೂಜಾಕೈಂಕರ್ಯಗಳು ಇರುವುದಿಲ್ಲ. ಎಂದಿನಂತೆ ಧಾರ್ಮಿಕ ಪೂಜಾ ಕೈಂಕರ್ಯಗಳು ನಡೆಯಲಿವೆ ಎಂದು ಇಒ ಮಂಗಳಮ್ಮ ಮಾಹಿತಿ ನೀಡಿದ್ದಾರೆ.



## ರಫೇಲ್ ಅವ್ಯವಹಾರದ ಬಗ್ಗೆ ಸ್ಪಷ್ಟನೆ ನೀಡುವಂತೆ ಆಗ್ರಹ

ಲಕ್ನೋ : ರಫೇಲ್ ಖರೀದಿಯಲ್ಲಿ ಅವ್ಯವಹಾರ ನಡೆದಿದೆ ಎನ್ನುವ ಅರೋಪದ ಬಗ್ಗೆ ಕೇಂದ್ರ ಸರ್ಕಾರ ಸೂಕ್ತ ಸ್ಪಷ್ಟನೆ ನೀಡಬೇಕು ಎಂದು ಬಹು ಜನ ಸಮಾಜವಾದಿ ಪಕ್ಷದ ಮುಖ್ಯಸ್ಥೆ ಮಾಯಾಮತಿ ಆಗ್ರಹಪಡಿಸಿಸಿದ್ದಾರೆ.



ರಫೇಲ್ ಯುದ್ಧ ವಿಮಾನ ಖರೀದಿ ಕುರಿತಂತೆ ಫ್ರೆಂಚ್ ಸರ್ಕಾರ ನ್ಯಾಯಾಂಗ ತನಿಖೆಗೆ ಆದೇಶಿಸಿದ ನಂತರ ಇದರಲ್ಲಿ ಸಾಕಷ್ಟು ಅವ್ಯವಹಾರ ನಡೆದಿರುವ ಸಾಧ್ಯತೆ ಇದೆ ಎಂದು ಸಾರ್ವಜನಿಕರು ಮಾತನಾಡಿಕೊಳ್ಳುತ್ತಿರುವುದರಿಂದ ಕೇಂದ್ರ ಸರ್ಕಾರ ಈ ಕುರಿತಂತೆ ಉನ್ನತ ತನಿಖೆಗೆ ಆದೇಶ ನೀಡಬೇಕು ಎಂದು ಅವರು ಟ್ವೀಟ್ ಮಾಡಿದ್ದಾರೆ.

ರಕ್ಷಣಾ ಉಪಕರಣಗಳ ಖರೀದಿಯಲ್ಲಿ ಕಮಿಷನ್ ಪಡೆಯುವುದು ಹೊಸ ವಿಚಾರವಲ್ಲ. ಹಿಂದಿನ ಕಾಂಗ್ರೆಸ್ ಸರ್ಕಾರದಲ್ಲೂ ಇದು ಮಾಮೂಲು ವಿಚಾರವಾಗಿತ್ತು ಎಂದು ಅವರು ಉಲ್ಲೇಖಿಸಿದ್ದಾರೆ.

ರಫೇಲ್ ಖರೀದಿಯಲ್ಲಿ ಯಾವುದೆ ಅವ್ಯವಹಾರ ನಡೆದಿಲ್ಲ ಎಂದಾದರೆ ಕೇಂದ್ರ ಸರ್ಕಾರ ಇದರ ಬಗ್ಗೆ ಸಾರ್ವಜನಿಕರಿಗೆ ಇರುವ ಅನುಮಾನ ಪರಿಹರಿಸಲು ಮುಂದಾಗಬೇಕು ಎಂದು ಅವರು ಒತ್ತಾಯಿಸಿದ್ದಾರೆ.

59 ಸಾವಿರ ಕೋಟಿ ರೂ.ಗಳಲ್ಲಿ ರಫೇಲ್ ಯುದ್ಧ ವಿಮಾನ ಖರೀದಿ ಮಾಡಲು ತೀರ್ಮಾನಿಸಿರುವ ಭಾರತ ಸರ್ಕಾರ ಈ ವ್ಯವಹಾರದಲ್ಲಿ ಭಾರಿ ಭ್ರಷ್ಟಾಚಾರ ನಡೆದಿದೆ ಎಂಬ ಆರೋಪ ಕೇಳಿ ಬಂದಿರುವ ಹಿನ್ನಲೆಯಲ್ಲಿ ಕಾಂಗ್ರೆಸ್ ಜಂಟಿ ಸದನ ಸಮಿತಿ ರಚಿಸುವಂತೆ ಒತ್ತಾಯಿಸುತ್ತಿದೆ.

## ಸಚಿವ ಶ್ರೀರಾಮುಲು ಮತ್ತು ಡಿಫ್ಯಾಕ್ಟೋ ಸಿಎಂ ವಿಜಯೇಂದ್ರ ವಿರುದ್ಧ ಪ್ರಕರಣ ದಾಖಲಿಸಲಿ: ಕಾಂಗ್ರೆಸ್ ಮಾಧ್ಯಮ ವಕ್ತಾರ ಪತ್ರೇಶ್ ಹಿರೇಮಠ್ ಆಗ್ರಹ

ಹಗರಿಬೊಮ್ಮನಹಳ್ಳಿ : ಆಪ್ತ ಸಹಾಯಕರ ಮೂಲಕ ಬಿಜೆಪಿ ಸಚಿವರು ಶಾಸಕರು ಲಂಚ ಸಂಗ್ರಹಿಸಿ ಆಪ್ತ ಸಹಾಯಕರುಗಳನ್ನು ಅಪರಾಧಿಯನ್ನಾಗಿಸಿ ಈ ಹಗರಣ ಮುಚ್ಚಿ ಹಾಕುವ ಹುನ್ನಾರ ನಡೆಸಿದ್ದು ಸಚಿವ ಶ್ರೀರಾಮುಲು ಮತ್ತು ಮುಖ್ಯಮಂತ್ರಿ ಪುತ್ರ ವಿಜಯೇಂದ್ರ ಅವರ ವಿರುದ್ಧವೂ ಪ್ರಕರಣ ದಾಖಲಿಸಬೇಕೆಂದು ರಾಜ್ಯ ಕಾಂಗ್ರೆಸ್ ಮಾಧ್ಯಮ ವಕ್ತಾರ ಪತ್ರೇಶ್ ಹಿರೇಮಠ್ ಆಗ್ರಹಿಸಿದ್ದಾರೆ.



ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ರಾಜ್ಯದಾದ್ಯಂತ ಸಚಿವರು ಶಾಸಕರ ಹೆಸರಿನಲ್ಲಿ ಪಿಎಗಳು ವರ್ಗಾವಣೆ, ಗುತ್ತಿಗೆ, ನೌಕರಿ ಆಮಿಷವೊಡ್ಡಿ ಹಣ ಸಂಗ್ರಹಿಸಿ ಲಕ್ಷಾಂತರ ಜನರಿಗೆ ಜನರಿಗೆ ವಂಚನೆ ಮಾಡುತ್ತಿದ್ದರೂ ಮುಖ್ಯಮಂತ್ರಿ ಧೃತರಾಷ್ಟನಂತೆ ಕಣ್ಣುಮುಚ್ಚಿ ಕುಳಿತಿದ್ದು ಕೌರವರ ಆಳ್ವಿಕೆಯಲ್ಲಿ ಜನತೆ ಕಂಗಾಲಾಗಿದ್ದು ಬಂದಿಸಿದ ಪಿಎ ರಾಜುವನ್ನು ರಾತ್ರಿಯೇ ಬಿಟ್ಟು ಕಳಿಸಿದ್ದೇಕೆ? ಎಂದು ಪ್ರಶ್ನಿಸಿದರು

ಈಗಾಗಲೇ ಬಿಜೆಪಿ ಸಚಿವ ಯೋಗೇಶ್ವರ ಮತ್ತು ಶಾಸಕರಾದ ಯತ್ನಾಳ್ ಮತ್ತು ಹೆಚ್ ವಿಶ್ವನಾಥ್ ವಿಜಯೇಂದ್ರ ನೀರಾವರಿ ಇಲಾಖೆಯಲ್ಲಿ ಭ್ರಷ್ಟಾಚಾರ ನಡೆಸುತ್ತಿದ್ದು ಎಂಬ ಆರೋಪಕ್ಕೆ ಪೂರಕವೆಂಬಂತೆ ಸ್ವತಃ ಸಚಿವ ರಾಮುಲು ಪಿಎ ರಾಜು ಆಪ್ತನೆಂದು ಒಪ್ಪಿಕೊಂಡಿರುವುದರಿಂದ ವಿಜಯೇಂದ್ರ ಮತ್ತು ರಾಮುಲು ನಡುವೆ ವ್ಯವಹಾರದಲ್ಲಿ ಮನಸ್ತಾಪವಾಗಿದೆ ಎಂಬಂತೆ ಕಾಣುತ್ತಿದ್ದು ಈ ಲಂಚ ಹಗರಣವನ್ನು ಸ್ವತಂತ್ರ ಸಂಸ್ಥೆಯಿಂದ ತನಿಖೆ ನಡೆಸಬೇಕು ಎಂದು ಪತ್ರೇಶ್ ಒತ್ತಾಯಿಸಿದರು.

## ಸ್ವಂತ ಹಣದಲ್ಲಿ ಬಸ್ ತುಂಗುದಾಣ ನವೀಕರಣ ಮಾಡಿಸಿರುವುದು ಶ್ಲಾಘನೀಯ

ಮದ್ದೂರು : ತಾಲೂಕಿನ ಕಬ್ಬಾರೆ ಗೇಟ್‌ನಲ್ಲಿ ಪ್ರಯಾಣಿಕರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ತಾಲೂಕು ಪಂಚಾಯಿತಿ ಸದಸ್ಯ ಚಲುವರಾಜು ಒಂದು ಲಕ್ಷ ರೂ. ಸ್ವಂತ ಹಣದಲ್ಲಿ ಬಸ್ ತುಂಗುದಾಣ ನವೀಕರಣ ಮಾಡಿಸಿರುವುದು ಶ್ಲಾಘನೀಯ ಸಂಗತಿ ಎಂದು ಕೆಪಿಸಿಸಿ ಸದಸ್ಯ ಎಸ್.ಗುರುಚರಣ್ ಮೆಚ್ಚುಗೆ ವ್ಯಕ್ತಪಡಿಸಿದರು.

ಭಾನುವಾರ ಬಸ್ ತುಂಗುದಾಣ ಉದ್ಘಾಟಿಸಿ ಮಾತನಾಡಿದ ಅವರು, ಬಸ್ ತಂಗುದಾಣದಿಂದ ಕಬ್ಬಾರೆ, ಎಲೆದೊಡ್ಡಿ, ನೀಲಕಂಠನಹಳ್ಳಿ ಗ್ರಾಮಗಳ ಗ್ರಾಮಸ್ಥರಿಗೆ ಅನುಕೂಲವಾಗಲಿದೆ. ಗ್ರಾಪಂ ಸದಸ್ಯ ರಾಘವೇಂದ್ರ ತಂಗುದಾಣವನ್ನು ಆಸಕ್ತಿವಹಿಸಿ ತಂಗುದಾಣದಲ್ಲಿ ರಕ್ತನಿಧಿ ಕೇಂದ್ರ, ಆಂಬುಲೆನ್ಸ್, ಅಗ್ನಿಶಾಮಕ ದಳ, ಸೆಸ್ಕ್ ಕಚೇರಿ, ಹಾಲು ಉತ್ಪಾದಕರ ಸಹಕಾರ ಸಂಘ, ವಾಟರ್ ಮ್ಯಾನ್, ಪೊಲೀಸ್, ಶಿಕ್ಷಣ, ಕೃಷಿ, ಆರೋಗ್ಯ ಇಲಾಖೆ ಸೇರಿದಂತೆ 70 ಕ್ಕೂ ಹೆಚ್ಚು ಕಚೇರಿಗಳ ದೂರವಾಣಿ ಸಂಖ್ಯೆಗಳನ್ನು ಬರೆಸಿ ಗ್ರಾಮಸ್ಥರಿಗೆ ಅನುಕೂಲ ಕಲ್ಪಿಸಿರುವುದು ಶ್ಲಾಘನೀಯ. ಎಲ್ಲಾ ತಂಗುದಾಣಗಳಲ್ಲಿ ಈ ರೀತಿಯ ಮಾಹಿತಿ ಬರೆಸಿದರೆ ಗ್ರಾಮಸ್ಥರಿಗೆ ಅನುಕೂಲವಾಗುತ್ತದೆ ಎಂದರು.

ಮುಂಬರುವ ಜಿಲ್ಲಾ ಮತ್ತು ತಾಪಂ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದ ಚುಕ್ಕಾಣಿ ಹಿಡಿಯುವುದು ನಿಶ್ಚಿತವಾಗಿದ್ದು. ಕೇಂದ್ರ ಮತ್ತು ರಾಜ್ಯದ ಬಿಜೆಪಿ ಸರ್ಕಾರಗಳು ಕರೊನಾ ಸಂಕಷ್ಟದಲ್ಲೂ ನಿರಂತರವಾಗಿ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡುವ ಮೂಲಕ ಜನ ಸಾಮಾನ್ಯರಿಗೆ ಗಾಯದ ಮೇಲೆ ಬರೆ ಎಳೆದಿದೆ. ಇದರಿಂದ ರೋಸಿ ಹೋಗಿರುವ ಮತದಾರರು ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಲಿದ್ದಾರೆಂದು ವಿಶ್ವಾಸ ವ್ಯಕ್ತಪಡಿಸಿದರು.

ಗ್ರಾಪಂ ಸದಸ್ಯರಾದ ರಾಘವೇಂದ್ರ, ಬೀರೇಶ್, ಶೈಲಜಾ, ಮುಖಂಡರಾದ ಕೆ.ಟಿ.ಪುಟ್ಟಸ್ವಾಮಿ, ಸುರೇಶ್, ಕುರಿಯಪ್ಪ, ನಂದೀಶ್, ಉಮೇಶ್, ನಾಗೇಶ್ ಇದ್ದರು.




*ಬಸ್ ತಂಗುದಾಣವನ್ನು ಕೆಪಿಸಿಸಿ ಸದಸ್ಯ ಎಸ್.ಗುರುಚರಣ್ ಉದ್ಘಾಟಿಸಿದರು. ಚೆಲುವರಾಜು, ರಾಘವೇಂದ್ರ, ಬೀರೇಶ್, ಶೈಲಜಾ, ಮುಖಂಡರಾದ ಕೆ.ಟಿ.ಪುಟ್ಟಸ್ವಾಮಿ, ಸುರೇಶ್, ಕುರಿಯಪ್ಪ, ನಂದೀಶ್, ಉಮೇಶ್, ನಾಗೇಶ್ ಇದ್ದರು.*

## ವಯೋ ನಿವೃತ್ತಿಗೊಂಡವರಿಗೆ ಬೀಳ್ಕೊಡುಗೆ



**ಪಾಂಡವಪುರ ಪಟ್ಟಣದ ಶಿಕ್ಷಕರ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಇತ್ತೀಚೆಗೆ ವಯೋನಿವೃತ್ತಿಗೊಂಡ ಮುಖ್ಯ ಶಿಕ್ಷಕರು, ಹಿರಿಯ ಶಿಕ್ಷಕರು ಅವರನ್ನು ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದಿಂದ ಸನ್ಮಾನಿಸಿ ಬೀಳ್ಕೊಡಲಾಯಿತು.**

ಪಾಂಡವಪುರ : ಪಟ್ಟಣದ ಶಿಕ್ಷಕರ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಇತ್ತೀಚೆಗೆ ವಯೋನಿವೃತ್ತಿಗೊಂಡ ಮುಖ್ಯ ಶಿಕ್ಷಕರು, ಹಿರಿಯ ಶಿಕ್ಷಕರು ಅವರನ್ನು ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದಿಂದ ಸನ್ಮಾನಿಸಿ ಬೀಳ್ಕೊಡಲಾಯಿತು.

ನಿವೃತ್ತ ಶಿಕ್ಷಕರಾದ ಪುಟ್ಟರಾಜು, ದೇವರಾಜು, ಗುಲ್ನಾಜ್ ಭಾನು ಸನ್ಮಾನಿತರು. ಈ ವೇಳೆ ಎಸ್.ಪರಮೇಶ್, ಎಸ್.ಎನ್. ಕೆಂಪೇಗೌಡ, ಎಂ.ಕೆ.ವಿಜಿಯಕುಮಾರ್, ಅಧ್ಯಕ್ಷ ಮಂಜುನಾಥ್, ಸುರೇಂದ್ರಕುಮಾರ್, ಸುಮಂಗಳಾ, ಮೇನಾಗರ ಕುಮಾರ್, ಮಂಜುಳಾ, ಸ್ವಾಮಿಗೌಡ (ಗಡ್ಡ), ಯೋಗನರಸಿಂಹೇಗೌಡ, ವೆಂಕಟೇಶ್, ಧನಂಜಯ, ಶಿವಣ್ಣ, ನಂದೀಶ್ ಇತರರಿದ್ದರು.

## ಆತ್ಮಹತ್ಯೆಗೆ ಶರಣಾದ ನೇಕಾರ ಕುಟುಂಬಕ್ಕೆ ನೀಲಂಕಂಠ ಮಸ್ತಮರಡಿ ಸಾಂತ್ವನ

ಬಾಗಲಕೋಟೆ : ಜಿಲ್ಲೆಯ ರಬಕವಿ-ಬನಹಟ್ಟಿ ತಾಲೂಕಿನ ರಾಂಪುರ ಗ್ರಾಮದ ನೇಕಾರ ಕುರುಹಿನಶೆಟ್ಟಿ ಷನ್ಮುಖಪ್ಪ ಮುರಗುಂಡಿ ಅವರು ಆತ್ಮಹತ್ಯೆಗೆ ಶರಣಾಗಿ ಸಾವನ್ನಪ್ಪಿದ ಹಿನ್ನಲೆಯಲ್ಲಿ ರಾಜ್ಯ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ನೀಲಕಂಠ ಮಾಸ್ತಮರಡಿ ಅವರು ಇಂದು ಭೇಟಿ ನೀಡಿ ಮೃತ ಕುಟುಂಬದವರಿಗೆ ಸಾಂತ್ವನ ಹೇಳಿ ಧೈರ್ಯ ತುಂಬಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಆತ್ಮಹತ್ಯೆ ಎಲ್ಲದಕ್ಕೂ ಪರಿಹಾರವಲ್ಲ ಎಲ್ಲವನ್ನು ಎದುರಿಸುವ ಆತ್ಮಬಲವನ್ನು ವೃದ್ಧಿಸಿಕೊಳ್ಳಬೇಕು, ನೇಕಾರ ಸಮುದಾಯಕ್ಕೆ ಸರ್ಕಾರದಿಂದ ಹಲವು ಸೌಲಭ್ಯಗಳಿದ್ದು ಪಡೆದುಕೊಳ್ಳುವುದರ ಬಗ್ಗೆ ಗಮನ ಹರಿಸಬೇಕೆಂದು ತಿಳಿಸಿದರು. ಈ ಸಂದರ್ಭದಲ್ಲಿ ರಬಕವಿ-ಬನಹಟ್ಟಿ, ರಾಂಪುರ, ತೆರದಾಳ ಗ್ರಾಮದ ನೇಕಾರ ಸಮಾಜದ ಹಿರಿಯರು, ಮುಖಂಡರು, ಉಪಸ್ಥಿತರಿದ್ದರು.



## ಬಹಿರಂಗ ಹರಾಜು

ಮಂಡ್ಯ : ಜಿಲ್ಲಾ ನ್ಯಾಯಾಲಯಗಳ ತೀರ್ಮಾನದಂತೆ ಸರ್ಕಾರ ಮುಟ್ಟುಗೋಲು ಹಾಕಿಕೊಂಡಿರುವ ಕೆಲವು ವಾಹನಗಳನ್ನು ಬಹಿರಂಗ ಹರಾಜು ಮಾಡಲಾಗುತ್ತಿದೆ.

ಆಸಕ್ತಿಯುಳ್ಳ ಸಾರ್ವಜನಿಕರು ಜುಲೈ 12 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ನಡೆಯುವ ಬಹಿರಂಗ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪುಟ–3

ಕ್ರಾಂತಿಯ ಕಿಡಿ

ಕಾಯಕಯೋಗಿ

KAYAKAYOGI-MORNING DAILY

ಕನ್ನಡ ದಿನಪತ್ರಿಕೆ

ಮಂಗಳವಾರ

06 ಜುಲೈ 2021

## 'ಮೇಕೆದಾಟು ಯೋಜನೆ ನಡೆಯುವುದು ಶತಸಿದ್ಧ'



ಬೆಂಗಳೂರು: ಮೇಕೆದಾಟು ಯೋಜನೆ ಬಗ್ಗೆ ನಿರ್ಧಾರ ಮಾಡಿದ್ದೇವೆ. ಈ ಯೋಜನೆ ನಡೆಯುವುದು ಶತಸಿದ್ಧ ಎಂದು ಕಂದಾಯ ಸಚಿವ ಆರ್. ಅಶೋಕ್ ಹೇಳಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು,ಅವರನ್ನು ಕೇಳಿ ಮಸಾಲೆ ಅರೆಯಬೇಕು ಅಂತಾ ಏನಿಲ್ಲ. ಮೇಕೆದಾಟು ಯೋಜನೆಗೆ ಏನೇನು ವ್ಯವಸ್ಥೆ ಆಗಬೇಕೋ ಆಗ್ತಿದೆ ಎಂದು ಹೇಳಿದ್ದಾರೆ.

ಇನ್ನು ಕೆಆರ್‌ಎಸ್ ನಲ್ಲಿ ಬಿರುಕು ಎಂಬ ಮಂಡ್ಯ ಸಂಸದೆ ಸುಮಲತಾ ಹೇಳಿಕೆ ವಿಚಾರವಾಗಿ ಮಾತನಾಡಿದ ಅವರು, ಇದು ಪದೇ ಪದೇ ಕೇಳಿ ಬರ್ತಿದೆ. ಆ ತರಹ ಏನೂ ಇಲ್ಲ. ಸುಮ್ಮನೇ ಇಂತ ಸುದ್ದಿಗಳು ಹರಿದಾಡಬಾರದು, ಜನ ಆತಂಕಕ್ಕೆ ಒಳಗಾಗುತ್ತಾರೆ. ನಾನು ಡಿಸಿ ಜೊತೆ ಕೂಡ ಮಾತಾಡಿದ್ದೇನೆ. ಕೆಆರ್‌ಎಸ್ ಸುತ್ತಮುತ್ತ ಇಷ್ಟು ಗಣಿಗಾರಿಕೆ ನಡೆಯಬಾರದು ಎಂಬ ಕಾನೂನಿದೆ. ಆ ರೀತಿ ಏನಾದ್ರೂ ಮಾಡಿದರೆ ನಾವು ಕ್ರಮಕೈಗೊಳ್ಳುತ್ತೇವೆ ಎಂದಿದ್ದಾರೆ.

# ಸಿಎಂ ಭೇಟಿಯಾದ ಹೆಚ್‌ಡಿಕೆ ; ಕುತೂಹಲ ಮೂಡಿಸಿದ ಮಾತುಕತೆ




ಬೆಂಗಳೂರು: ಮುಖ್ಯಮಂತ್ರಿ ಬಿ.ಎಸ್.ಯಡಿ ಯೂರಪ್ಪ ಅವರನ್ನು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿಯವರು ಸೋಮವಾರ ಭೇಟಿ ಮಾಡಿ ಮಾತುಕತೆ ನಡೆಸಿದ್ದು, ನಾಯಕರಿಬ್ಬರ ಈ ಭೇಟಿ ಕುತೂಹಲ ಕೆರಳಿಸಿದೆ.

ಸೋಮವಾರ ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾಗೆ ಆಗಮಿಸಿದ ಕುಮಾರಸ್ವಾಮಿಯವರು ಅವರು ಯಡಿಯೂರಪ್ಪ ಅವರೊಂದಿಗೆ ಕೆಲ ಕಾಲ ಮಾತುಕತೆ ನಡೆಸಿದ್ದಾರೆಂದು ತಿಳಿದುಬಂದಿದೆ.

ಶಾಸಕರಾದ ಸಿ.ಎಸ್. ಪುಟ್ಟರಾಜು, ಎಂ.ಶ್ರೀನಿವಾಸ್ ಹಾಗೂ ಮಳವಳ್ಳಿ ಶಾಸಕ ಅನ್ನದಾನಿ ಜೊತೆಗೆ ಸಿಎಂರನ್ನು ಭೇಟಿ ಮಾಡಿದ ಕುಮಾರಸ್ವಾಮಿಯವರು ಕೆಲವು ಪ್ರಮುಖ ವಿಚಾರಗಳ ಕುರಿತಾಗಿ ಮಾತುಕತೆ ನಡೆಸಿದ್ದಾರೆಂದು ಹೇಳಲಾಗುತ್ತಿದೆ.

ಮಂಡ್ಯ ಮೈಶುಗರ್ ಖಾಸಗೀಕರಣ ಸಮಸ್ಯೆ, ಮನ್ಮುಲ್‌ನಲ್ಲಿ ಹಾಲು–ನೀರು ಬೆರಕೆ ಪ್ರಕರಣ, ಜಿಲ್ಲಾ ಪಂಚಾಯಿತಿ ತಾ.ಪಂ ಮೀಸಲಾತಿ ವಿಚಾರಗಳ ಬಗ್ಗೆ ಕುಮಾರಸ್ವಾಮಿಯವರು ಸಿಎಂ ಬಿ.ಎಸ್. ಯಡಿಯೂರಪ್ಪ ಅವರ ಜೊತೆಗೆ ಮಾತುಕತೆ ನಡೆಸಿದ್ದಾರೆ ಎನ್ನಲಾಗಿದೆ.

ಮೈಶುಗರ್ ಕಾರ್ಖಾನೆ ಖಾಸಗೀಕರಣ ಹಾಗೂ ಮನ್ಮುಲ್ ಹಗರಣ ಸಾಕಷ್ಟು ಚರ್ಚೆಗೆ ಗ್ರಾಸವಾಗುತ್ತಿದೆ. ಮೈಶುಗರ್ ಕಾರ್ಖಾನೆ ಖಾಸಗೀಕರಣ ವಿರೋಧಿಸಿ ಹಾಗೂ ಮನ್ಮುಲ್ ಹಗರಣವನ್ನ ಸಿಬಿಐಗೆ ವಹಿಸುವಂತೆ ಒತ್ತಾಯಿಸಿ ಮಂಡ್ಯದಲ್ಲಿ ಪ್ರತಿಭಟನಾ ಧರಣಿ ನಡೆದಿದೆ.

ಈ ವಿಚಾರವಾಗಿ ಸಿಎಂ ಯಡಿಯೂರಪ್ಪ ಅವರೊಂದಿಗೆ ಕುಮಾರಸ್ವಾಮಿ ಚರ್ಚೆ ನಡೆಸಿದ್ದಾರೆ ಎನ್ನಲಾಗಿದೆ. ಇದೇ ವೇಳೆ ಮಂಡ್ಯ ಅಭಿವೃದ್ಧಿ ವಿಚಾರವಾಗಿಯೂ ಮಾತುಕತೆ ನಡೆಸಿದ್ದಾರೆ ಎಂದು ತಿಳಿದುಬಂದಿದೆ.

## ದಕ್ಷಿಣೆ ಕಾಸಿಗೆ ಆಸೆ ಬಿದ್ದು ಕೆಲ ಮಠಾಧೀಶರು ಸಿಎಂ ಪರ ಮಾತು
## ಸಿಎಂ ವಿರುದ್ಧ ಮತ್ತೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಾಗ್ದಾಳಿ

ಮೈಸೂರು : ಯಡಿಯೂರಪ್ಪ ಎಲ್ಲ ಸಮುದಾಯಗಳ ನಾಯಕತ್ವ ಮುಗಿಸುತ್ತಿದ್ದಾರೆ. ಲಿಂಗಾಯತ ಸಮುದಾಯದಲ್ಲಿ ಯಾವೊಬ್ಬ ನಾಯಕನನ್ನ ನೀವು ಬೆಳೆಯಲು ಬಿಡುತ್ತಿಲ್ಲ. ರಮೇಶ್ ಜಾರಕಿಹೊಳಿಗೆ ಅವರಿಗೆ ಅನ್ಯಾಯ ಆಗಿದೆ. ಅವರ ಕೇಸ್‌ನಲ್ಲಿ ಬಿ ರಿಪೋರ್ಟ್ ಹಾಕುವ ಅವಕಾಶ ಇದ್ದರು ಬಿಡ್ತಿಲ್ಲ. ಬ್ಲಾಕ್ ಮೇಲ್ ಮಾಡುವ ಸಲುವಾಗಿಯೇ ಆ ಕೇಸನ್ನ ಇಟ್ಟುಕೊಳ್ಳಲಾಗಿದೆ. ವಾಲ್ಮೀಕಿ ಸಮುದಾಯದ ಲೀಡರ್‌ಶಿಪ್ ಮುಗಿಸುವ ಹುನ್ನಾರ ನಡೆದಿದೆ. ಕೆ.ಎಸ್ ಈಶ್ವರಪ್ಪ ಖಾತೆಗೆ ಸಂಬಂಧಪಟ್ಟ 2 ಸಾವಿರ ಕೋಟಿ ಕಾಮಗಾರಿ. ಮುಖ್ಯಮಂತ್ರಿ ತಮ್ಮ ಬೀಗನಿಗೆ ಕೊಡಿಸಿಕೊಂಡ್ರು. ಹೀಗೆ ಲಿಂಗಾಯತ, ಕುರುಬ, ನಾಯಕ, ಎಲ್ಲ ನಾಯಕನ್ನ ಮೋಸ ಮಾಡುತ್ತಿದ್ದಾರೆ. ರಾಜ್ಯದಲ್ಲಿ ಇವರು ಒಬ್ಬರೇ ಇರಬೇಕು ಎಂದುಕೊಂಡಿದ್ದರೆ ಅದು ಸಾಧ್ಯವಿಲ್ಲ ಎಂಬುದಾಗಿ ಮತ್ತೆ ಸಿಎಂ ಯಡಿಯೂರಪ್ಪ ವಿರುದ್ಧ ಶಾಸಕ ಬಸನಗೌಡ ಯತ್ನಾಳ್ ಗುಡುಗಿದ್ದಾರೆ.

ಇಂದು ಚಾಮುಂಡಿ ಬೆಟ್ಟದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯವನ್ನು ಲೂಟಿ ಮಾಡುತ್ತಿರುವ ದುಷ್ಟರ ಸಂಹಾರ ಆಗಬೇಕು. ರಾಜ್ಯದಲ್ಲಿ ಅನ್‌ಲಾಕ್ ಶುರುವಾದ ಹಿನ್ನೆಲೆಯಲ್ಲಿ ಚಾಮುಂಡೇಶ್ವರಿ ದರ್ಶನಕ್ಕೆ ಬಂದಿದ್ದೇನೆ. ದುಷ್ಟರ ಸಂಹಾರ ಮಾಡು ಅಂತ ತಾಯಿ ಬಳಿ ಬೇಡಿಕೊಂಡಿದ್ದೇನೆ. ಯಾರು ಅಪಾರ ಭ್ರಷ್ಟಾಚಾರದಲ್ಲಿ ತೊಡಗಿದ್ದಾರೋ, ರಾಜ್ಯವನ್ನು ಲೂಟಿ ಮಾಡುತ್ತಿದ್ದಾರೋ, ಅಧಿಕಾರ ದುರುಪಯೋಗ ಮಾಡಿಕೊಳ್ಳುತ್ತಿದ್ದಾರೋ ಅವರೆಲ್ಲರೂ ದುಷ್ಟರು.



ಅತಿ ಶೀರ್ಘದಲ್ಲೇ ದುಷ್ಟ ಸಂಹಾರ ಆಗುವ ವಿಶ್ವಾಸವೂ ಇದೆ ಎಂಬುದಾಗಿ ಹೇಳಿದರು.

ಇದೇ ಸಂದರ್ಭದಲ್ಲಿ ಬಿಜೆಪಿ ಹೈಕಮಾಂಡ್ ಯತ್ನಾಳ್‌ಗೆ ಮಾಹಿತಿ ನೀಡುತ್ತಿದೆ ಎಂಬ ಕಾಂಗ್ರೆಸ್ ನಾಯಕರ ಆರೋಪದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಆಗಿದ್ರೆ ಕಾಂಗ್ರೆಸ್‌ನವ್ರು ಕತ್ತೆ ಕಾಯ್ತ ಇದ್ದಾರಾ? ಭ್ರಷ್ಟರ ಜೊತೆ ವಿಪಕ್ಷಗಳು ಕೈ ಜೋಡಿಸಿವೆ. ಶೋಭ ಡೆವಲಪರ್ಸ್‌ನಲ್ಲಿ ಯಾರ್ಯಾರು ಪಾಲುದಾರರು. ಇದನ್ನ ಮಾಧ್ಯಮಗಳು ತನಿಖೆ ಮಾಡಬೇಕು. ರಾಜ್ಯದಲ್ಲಿ ವಿರೋಧ ಪಕ್ಷಗಳು ಸತ್ತು ಹೋಗಿವೆ. ಬಿ ಎಸ್ ಯಡಿಯೂರಪ್ಪ ಜೊತೆ ಎಲ್ಲರೂ ಶಾಮೀಲಾಗಿದ್ದಾರೆ. ಅವರಿಗೂ ಭ್ರಷ್ಟಾಚಾರದಲ್ಲಿ ಪಾಲಿದೆ. ಈಗಾಗಿ ಅವರು ಯಾರು ಯಡಿಯೂರಪ್ಪ ವಿರುದ್ಧ ಮಾತಾನಾಡುತ್ತಿಲ್ಲ. ಅವರಿಗೂ ಯಡಿಯೂರಪ್ಪ ಮುಂದುವರಿಯಬೇಕು ಎಂಬುದಾಗಿ ಕಾಂಗ್ರೆಸ್ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದರು.

ದಕ್ಷಿಣೆ ಕಾಸಿಗೆ ಆಸೆ ಬಿದ್ದು ಕೆಲ ಮಠಾಧೀಶರು ಸಿಎಂ ಪರ ಮಾತನಾಡುತ್ತಿದ್ದಾರೆ. ಲವ್ ಜಿಹಾದ್ ತಡೆಯಲು ಮಠಾಧೀಶರು ಮುಂದಾಗಬೇಕು. ಕೆಟ್ಟವರಿಗೆ ಬುದ್ದಿ ಹೇಳುವ ಕೆಲಸ ಮಾಡಬೇಕು. ಅದನ್ನು ಬಿಟ್ಟು ಸಿಎಂ ಬದಲಾವಣೆ ಮಾಡಿದ್ರೆ ಬೀದಿಗೆ ಬರ್ತೀವಿ ಅನ್ನೋದು ಸರಿಯಲ್ಲ. ಸಿಎಂ ಕುಟುಂಬದಿಂದ ಲಿಂಗಾಯತ ಸಮಾಜಕ್ಕೆ ಕೆಟ್ಟ ಹೆಸರು ಬಂದಿದೆ. ಇದರ ಬಗ್ಗೆ ಮಾತನಾಡುವ ಬದಲು ಭ್ರಷ್ಟರ ಪರವಾಗಿ ಮಠಾಧೀಶರು ಮಾತನಾಡಬಾರದು. ನಿಮಗೆ ಅಷ್ಟೊಂದು ರಾಜಕೀಯ ಹುಚ್ಚು ಇದ್ರೆ ಖಾವಿ ತೆಗೆದು ಖಾದಿ ಧರಿಸಿ ಬನ್ನಿ ಎಂಬುದಾಗಿ ಹೇಳುವ ಮೂಲಕ ಸಿಎಂ ಪರ ಬ್ಯಾಟ್ ಬೀಸುತ್ತಿರುವ ಮಠಾಧೀಶರ ವಿರುದ್ಧ ಯತ್ನಾಳ್ ವಾಗ್ದಾಳಿ ನಡೆಸಿದರು.

ಇನ್ನೂ ಬಿ.ವೈ. ವಿಜಯೇಂದ್ರ ವಿರುದ್ಧ ವಾಗ್ದಾಳಿ ನಡೆಸಿದ ಅವರು,

* ದಿನಕ್ಕೆ ನೂರು ಕೋಟಿ ರೂ. ಲೂಟಿ ಹೊಡೆಯುತ್ತಿದ್ದಾರೆ. ಕೆಟ್ಟವರೊಂದಿಗೆ ಒಳ್ಳೆಯವರೂ ಸೇರಿಕೊಂಡಿದ್ದಾರೆ. ಹೀಗಾಗಿ ಮುಖ್ಯಮಂತ್ರಿ ಬದಲಾವಣೆ ವಿಳಂಬ ಆಗುತ್ತಿದೆ
* ಹೈಕಮಾಂಡ್ ಕೂಡ ಮುಖ್ಯಮಂತ್ರಿ ಬದಲಾವಣೆಗೆ ಪರಿಶೀಲನೆ ಮಾಡುತ್ತಿದೆ

ಸಿಎಂ ನಿವಾಸ ಕಾವೇರಿ ಹಿಂಭಾಗದಲ್ಲಿ ಗೆಸ್ಟ್‌ಗೌಸ್ ಇದೆ. ಇವರ ಎಲ್ಲ ಡೀಲ್‌ಗಳೂ ಅಲ್ಲೇ ನಡೆಯೋದು. ಸಿಸಿಬಿ ಪೊಲೀಸರು ಅಲ್ಲಿಗೆ ಯಾಕೆ ರೈಡ್ ಮಾಡಲ್ಲ ಎಂಬುದಾಗಿ ಪ್ರಶ್ನಿಸಿದರು.

ಇನ್ನೂ ಆಗಸ್ಟ್ 15 ನೂತನ ಸಿಎಂ ಧ್ವಜಾರೋಹಣ ಚರ್ಚೆ ವಿಚಾರವಾಗಿಯೂ ಮಾತನಾಡಿದ ಅವರು, ಅಲ್ಲಿವರೆಗೂ ಯಾಕೆ ಮುಂದುವರಿಸಬೇಕು. ಶೀಘ್ರದಲ್ಲೇ ಸಿಎಂ ಬದಲಾವಣೆ ಮಾಡಬೇಕು. ದಿನಕ್ಕೆ ನೂರು ಕೋಟಿ ರೂ. ಲೂಟಿ ಹೊಡೆಯುತ್ತಿದ್ದಾರೆ. ಕೆಟ್ಟವರೊಂದಿಗೆ ಒಳ್ಳೆಯವರೂ ಸೇರಿಕೊಂಡಿದ್ದಾರೆ. ಹೀಗಾಗಿ ಮುಖ್ಯಮಂತ್ರಿ ಬದಲಾವಣೆ ವಿಳಂಬ ಆಗುತ್ತಿದೆ ಎಂಬುದಾಗಿ ಹೇಳಿದರು.

ಇದೇ ಸಂದರ್ಭದಲ್ಲಿ ಕುರುಕ್ಷೇತ್ರ ಯುದ್ಧದಲ್ಲಿ ಕೌರವರೊಂದಿಗೆ ಭೀಷ್ಮ, ದ್ರೋಣಾಚಾರ್ಯರಂತಹ ಒಳ್ಳೆಯವರೂ ಇದ್ದರು. ಒಮ್ಮೊಮ್ಮೆ ಹೀಗೆಲ್ಲ ಆಗುತ್ತೆ. ಆದರೆ ದುಷ್ಟ ಸಂಹಾರ ಆಗಲೇಬೇಕಲ್ವ ? ಕೆಟ್ಟವರಿಗೆ ಕೊನೆಗಾಲ ಅಂತ ಇದ್ದೇ ಇರುತ್ತೆ. ಅಲ್ಲಿವರೆಗೂ ಕಾಯೋಣ. ಹೈಕಮಾಂಡ್ ಕೂಡ ಮುಖ್ಯಮಂತ್ರಿ ಬದಲಾವಣೆಗೆ ಪರಿಶೀಲನೆ ಮಾಡುತ್ತಿದೆ ಎಂದು ತಿಳಿಸಿದರು.

## ಮನ್‌ಮುಲ್‌ನಲ್ಲಿ ಎಷ್ಟು ಕೋಟಿ ಹಗರಣ ನಡೆದಿದೆ? ಸಿಬಿಐನಿಂದ ಗೊತ್ತಾಗಲಿದೆ : ಸಿಆರ್‌ಎಸ್



ಮದ್ದೂರು : ತಾಲೂಕಿನ ಗೆಜ್ಜಲಗೆರೆಯ ಜಿಲ್ಲಾ ಹಾಲು ಒಕ್ಕೂಟದಲ್ಲಿ ನಡೆದಿರುವ ಹಾಲಿಗೆ ನೀರು ಮಿಶ್ರಣ ಮಾಡಿರುವ ಪ್ರಕರಣದಲ್ಲಿ ಎಷ್ಟು ಕೋಟಿ ರೂ.ಗಳ ಹಗರಣ ನಡೆದಿದೆ ಎಂಬುವುದು ಸಿಬಿಐ ತನಿಖೆಯಿಂದ ಮಾತ್ರ ಗೊತ್ತಾಗಬೇಕಾಗಿದೆ ಎಂದು ಮಾಜಿ ಸಚಿನ ಎನ್.ಚಲುವರಾಯಸ್ವಾಮಿ ಅವರು ತೀಕ್ಷ್ಣವಾಗಿ ನುಡಿದಿದ್ದಾರೆ.

ತಾಲೂಕಿನ ಕೊಪ್ಪದಲ್ಲಿ ನಿನ್ನೆ ಆಟೋ ಚಾಲಕರಿಗೆ ಆಹಾರ ಪದಾರ್ಥಗಳ ಕಿಟ್ ವಿತರಿಸಿ ಮಾತನಾಡಿದ ಅವರು, ಜಿಲ್ಲಾ ಹಾಲು ಒಕ್ಕೂಟದಲ್ಲಿ ಇಷ್ಟು ದೊಡ್ಡ ಮಟ್ಟದ ಹಗರಣ ನಡೆಯಬಾರದಿತ್ತು. ನಡೆದಿದೆ, ಈ ಹಗರಣವನ್ನು ಸಿಬಿಐ ಅಥವಾ ಸಿಒಡಿ ತನಿಖೆಗೆ ಒಪ್ಪಿಸುವಂತೆ ಮೊದಲೇ ನಾನು ಹೇಳಿದ್ದೆ. ಪ್ರಕರಣವನ್ನು ಸಿಐಡಿಗೆ ಒಪ್ಪಿಸಿರುವುದು ಸ್ವಾಗತಾರ್ಹ. ಸಿಐಡಿ ಅಧಿಕಾರಿಗಳು ಪ್ರಕರಣದ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರಿಗೆ ಶಿಕ್ಷೆಕೊಡಿಸಿ ಜಿಲ್ಲಾ ಹಾಲು ಒಕ್ಕೂಟವನ್ನು ಉಳಿಸಲಿ ಎಂದು ಒತ್ತಾಯ ಮಾಡಿದರು.

ಮಂಡ್ಯ ಮೈಷಗರ್ ಸಕ್ಕರೆ ಕಾರ್ಖಾನೆಯನ್ನು ಸರ್ಕಾರ ಖಾಸಗಿಯ ವರಿಗೆ ನೀಡಬಾರದು ಸರ್ಕಾರಿ ಸ್ವಾಮ್ಯದಲ್ಲೆ ನಡೆಸಬೇಕು. ಈಗಾಗಲೇ ರೈತ ಸಂಘದವರು ಸಕ್ಕರೆ ಕಾರ್ಖಾನೆಯನ್ನು ಖಾಸಗಿಯವರಿಗೆ ನೀಡುತ್ತಿರುವ ಸರ್ಕಾ ರದ ಕ್ರಮ ಖಂಡಿಸಿ ಪ್ರತಿಭಟನೆ ಮಾಡಲು ಮುಂದಾಗಿದ್ದಾರೆ ಇದಕ್ಕೆ ನನ್ನ ಬೆಂಬಲ ವ್ಯಕ್ತಪಡಿಸಿದ್ದೇನೆ ಎಂದು ತಿಳಿಸಿದರು.

ಸರ್ಕಾರ ಕಾರ್ಖಾನೆಯನ್ನು ನಡೆಸು ವುದಾದರೆ ನಡೆಸಲಿ ಇಲ್ಲವೆ ತಟಸ್ಥ ವಾಗಿರಲಿ. ಬೇರೆಯವರಿಗೆ ಲೀಜ್‌ಕೊ ಡುವುದು ಬೇಡ. ಮುಂದೆ ಬೇರೆ ಸರ್ಕಾರ ಬಂದಾಗ ಸರ್ಕಾರವೇ ಕಾರ್ಖಾನೆ ಮುಂದುವರೆಸಲಿ ಎಂದು ಸರ್ಕಾರಕ್ಕೆ ಸಲಹೆ ನೀಡಿದರು.

ಮುಂಬರುವ ಜಿಲ್ಲಾ ಹಾಗೂ ತಾಪಂ ಚುನಾವಣೆಗೆ ಪೂರ್ವಸಿದ್ದತೆ ಮಾಡಿ ಕೊಂಡಿಲ್ಲ. ಮೀಸಲಾತಿ ಪ್ರಕಟವಾಗಿದೆ. ಮೀಸಲಾತಿ ಬದಲಾವಣೆಗೆ ಅರ್ಜಿ ಸಲ್ಲಿಸಲು ಅವಕಾಶ ಇರುವುದಿರಿಂದ. ಮೀಸಲಾತಿ ಅಂತಿಮಗೊಂಡ ನಂತರ ಈ ಸಂಬಂಧ ಕಾರ್ಯಕರ್ತರ ಸಭೆ ಕರೆದು ಕ್ರಮ ಕೈಗೊಳ್ಳಲಾಗುವುದು ಎಂದರು. ನಾಗಮಂಗಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ಎನ್.ದಿವಾಕರ್, ಡಿಸಿಸಿ ಬ್ಯಾಂಕ್ ನಿರ್ದೇಶಕ ಜೋಗಿಗೌಡ, ತಾಪ ಮಾಜಿ ಸದಸ್ಯ ತೋಯಜಾಕ್ಷ, ಗ್ರಾಪ ಸದಸ್ಯರಾದ ನವೀನ್‌ಕುಮಾರ್, ರುದ್ರೇಶ್, ಗಿರೀಶ್, ಮುಖಂಡರಾದ ರಮೇಶ್‌ಗೌಡ, ದೇವರಾಜು ಸೇರಿದಂತೆ ಇತರರಿದ್ದರು.

## ಡಾ.ಎ.ಜಿ.ಅಸ್ರಣ್ಣರಿಗೆ ಮ್ಯಾನ್‌ಕೈಂಡ್ ಫಾರ್ಮ ಪ್ರಶಸ್ತಿ

ಪಾಂಡವಪುರ : ಕಳೆದ 48 ವರ್ಷಗಳಿಂದಲೂ ವೈದ್ಯಕೀಯ ವೃತ್ತಿಯಲ್ಲಿ ತೊಡಗಿ ಸಾವಿರಾರು ಜನರ ಆರೋಗ್ಯ ತಪಾಸಣೆ ಮಾಡಿರುವ ತಾಲೂಕಿನ ಹಿರಿಯ ಜನಪ್ರಿಯ ವೈದ್ಯರಾದ ಡಾ.ಎ.ಜಿ.ಅಸ್ರಣ್ಣ ಅವರಿಗೆ ನವದೆಹಲಿಯ ಮ್ಯಾನ್‌ಕೈಂಡ್ ಫಾರ್ಮ ಪ್ರಶಸ್ತಿ ಲಭಿಸಿದೆ.



ಪಟ್ಟಣದ ಪೊಲೀಸ್ ಠಾಣೆ ರಸ್ತೆಯಲ್ಲಿರುವ ಹರೇ ಶ್ರೀನಿವಾಸ ಕನ್ಸಲ್‌ಟೇಸನ್ ರೂಮ್ (ಪ್ರಸಾದ್ ಕ್ಲಿನಿಕ್) ಖಾಸಗಿ ಕ್ಲಿನಿಕ್ ನಡೆಸುತ್ತಿರುವ ಡಾ.ಎ.ಜಿ.ಅಸ್ರಣ್ಣ ಅವರು ಕಳೆದ ಎರಡು ವರ್ಷಗಳಿಂದಲೂ ಕೊರೊನಾ 1 ಹಾಗೂ 2ನೇ ಅಲೆ ಭಾರತ ದೇಶವಲ್ಲದೇ ಇಡೀ ವಿಶ್ವವನ್ನೇ ತಲ್ಲಣಗೊಳಿಸಿತು. ಈ ಸಂದರ್ಭದಲ್ಲಿ ಡಾ.ಎ.ಜಿ. ಅಸ್ರಣ್ಣ ಅವರು ಕೊರೊನಾ ವಾರಿಯರ್ಸ್ ಆಗಿ ಪಾಂಡವಪುರ ತಾಲೂಕಿನ ಜನತೆಗೆ ಪ್ರತಿ ನಿತ್ಯ 24*7 ಮಾದರಿಯಲ್ಲಿ ಚಿಕಿತ್ಸೆ ನೀಡುವ ಮೂಲಕ ಜನರ ಸೇವೆ ಮಾಡಿದನ್ನು ಪರಿಗಣಿಸಿ ನವದೆಹಲಿಯ ಮ್ಯಾನ್‌ಕೈಂಡ್ ಫಾರ್ಮ ಪ್ರಶಸ್ತಿ ನೀಡಿ ಗೌರವಿಸಿದೆ.

ಮೂಲತಹಃ ದಕ್ಷಿಣ ಕನ್ನಡ ಜಿಲ್ಲೆಯ ಕುಕ್ಕೆ ಸುಬ್ರಹ್ಮಣ್ಯದವರಾದ ಡಾ.ಎ.ಜಿ.ಅಸ್ರಣ್ಣ ಅವರು ಬಾಲ್ಯದಿಂದಲೇ ಪಾಂಡವಪುರ ಪಟ್ಟಣದಲ್ಲಿ ನೆಲೆಸಿ ಮೈಸೂರು, ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ವೈದ್ಯಕೀಯ ಪದವಿ ಪೂರೈಸಿ ಪಾಂಡವಪುರ ಖಾಸಗಿ ಕ್ಲಿನಿಕ್ ಆರಂಭಿಸಿದರು.

ಕಳೆದ 48 ವರ್ಷಗಳಿಂದ ಪಾಂಡವಪುರ ಜನರ ಸೇವೆ ಮಾಡುತ್ತಿದ್ದು, ಕೆಲವು ಸಂಘ–ಸಂಸ್ಥೆಗಳು ಸನ್ಮಾನ ಮಾಡಲು ಮುಂದೆ ಬಂದಾಗ ನಯವಾಗಿಯೇ ತಿರಸ್ಕರಿಸಿದ್ದೆ. ಜತೆಗೆ ತಾವೆಂದಿಗೂ ಪ್ರಶಸ್ತಿ ಹಿಂದೆ ಬಿದ್ದವರಲ್ಲ. ಅಲ್ಲದೇ ಪ್ರಶಸ್ತಿಗಾಗಿ ಆಸೆ ಕೂಡ ಪಟ್ಟಿಲ್ಲ. ಆದರೆ ಕೊರೊನಾದಂತಹ ಈ ಸಂದಿಗ್ಧ ಕಾಲಘಟ್ಟದಲ್ಲಿ ಜನರ ಚಿಕಿತ್ಸೆ ನನಗೆ ಅತಿ ಮುಖ್ಯವಾಗಿತ್ತು. ಈ ಸೇವೆಯನ್ನು ಗುರುತಿಸಿ ನವದೆಹಲಿಯ ಮ್ಯಾನ್ ಕೈಂಡ್ ಫಾರ್ಮದವರು ನೀಡಿರುವ ಈ ಮ್ಯಾನ್ ಕೈಂಡ್ ಪ್ರಶಸ್ತಿಯನ್ನು ನಿರಾಕರಿಸುವುದು ಸರಿಯಲ್ಲ ಎಂಬ ಅಭಿಪ್ರಾಯದಿಂದ ಬಹಳ ಸಂತಸದಿಂದಲೇ ಪ್ರಶಸ್ತಿ ಸ್ವೀಕರಿಸಿದ್ದೇನೆ ಎಂದು ಪ್ರಶಸ್ತಿ ಪುರಸ್ಕೃತ ವೈದ್ಯ ಡಾ.ಎ.ಜಿ.ಅಸ್ರಣ್ಣ ತಿಳಿಸಿದರು.

## ಕಬಿನಿ ಜಲಾಶಯದಿಂದ ಕೆರೆಗಳಿಗೆ ನೀರು ಬಿಡಲು ನಿರ್ಧಾರ: ಎಸ್.ಟಿ.ಸೋಮಶೇಖರ್

ಮೈಸೂರು: ಕಬಿನಿ ಜಲಾಶಯ ವ್ಯಾಪ್ತಿಯ ಕೆರೆಗಳಿಗೆ ನೀರು ತುಂಬಿಸಲು ಜುಲೈ 5 ರಿಂದಲೇ ನೀರು ಹರಿಸಲು ನಿರ್ಧರಿಸಲಾಗಿದೆ ಎಂದು ಸಹಕಾರ ಮತ್ತು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಹೇಳಿದರು.



ಸೋಮವಾರ ನಗರದಲ್ಲಿ ಜರುಗಿದ ಕಬಿನಿ ಜಲಾಶಯದ ನೀರಾವರಿ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

'ಕಬಿನಿ ಜಲಾಶಯ ವ್ಯಾಪ್ತಿಯ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದೇನೆ. ಇಂದಿನ ನೀರಿನ ಲಭ್ಯತೆ ಮತ್ತು ಹಿಂದಿನ ವರ್ಷಗಳ ಅನುಭವದ ಮೇಲೆ ಈ ವ್ಯಾಪ್ತಿಯ ಎಲ್ಲಾ 52 ಕೆರೆಗಳನ್ನು ತುಂಬಿಸಲು ಇಂದಿನಿಂದಲೇ ನೀರು ಬಿಡಲಾಗುವುದು' ಎಂದು ತಿಳಿಸಿದರು.

'ಕಾಲುವೆ ದುರಸ್ತಿ, ಹೂಳೆತ್ತುವ ಕೆಲಸವನ್ನು ತ್ವರಿತವಾಗಿ ಮಾಡಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದ್ದೇವೆ. ನಾಲೆಯ ಕೊನೆಯ ಭಾಗದ ಕೆರೆಗೆ ಜುಲೈ ಅಂತ್ಯದ ವರೆಗೆ ನೀರು ತುಂಬಿಸದಿದ್ದರೆ ಪ್ರತಿಭಟನೆ ಕೂರುವುದಾಗಿ ಶಾಸಕರು ಹೇಳಿದ್ದಾರೆ. ಈ ಅವಧಿಯೊಳಗೆ ನೀರು ತುಂಬಿಸಬೇಕು ಎಂಬ ಬೇಡಿಕೆಗೆ ನನ್ನ ಸಹಮತ ಇದೆ' ಎಂದರು.

'52 ಕೆರೆಗಳನ್ನು ತುಂಬಿಸಲು ಸೋಮವಾರದಿಂದ 15 ದಿನಗಳವರೆಗೆ ಸುಮಾರು 1 ಟಿಎಂಸಿ ಅಡಿ ನೀರು ಬಿಡಲು ನಿರ್ಣಯ ಮಾಡಿದ್ದೇವೆ. ಜಲಾಶಯದಲ್ಲಿ ಈಗ 14.5 ಟಿಎಂಸಿ ಅಡಿ ನೀರು ಲಭ್ಯವಿದೆ. ಈ ಪೈಕಿ 5 ಟಿಎಂಸಿ ಅಡಿ ನೀರನ್ನು ನೀರಾವರಿ ಉದ್ದೇಶಕ್ಕೆ ಬಳಸಿಕೊಳ್ಳಲು ಉದ್ದೇಶಿಸಲಾಗಿದೆ' ಎಂದು ತಿಳಿಸಿದರು.

ಸಭೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಸುರೇಶ್ ಕುಮಾರ್, ಸಂಸದ ಪ್ರತಾಪಸಿಂಹ, ಶಾಸಕರಾದ ಎನ್. ಮಹೇಶ್, ಸಿ.ಅನಿಲ್ ಕುಮಾರ್, ಅಶ್ವಿನ್ ಕುಮಾರ್, ಹರ್ಷವರ್ಧನ್, ಮುಡಾ ಅಧ್ಯಕ್ಷ ಎಚ್.ವಿ.ರಾಜೀವ್, ಕಾವೇರಿ ನೀರಾವರಿ ನಿಗಮದ ಮುಖ್ಯ ಎಂಜಿನಿಯರ್ ಶಂಕರೇಗೌಡ ಪಾಲ್ಗೊಂಡರು.

## ವಿಶ್ವನಾಥ್ ಚಾಮರಾಜನಗರ ವರದಿಗಾರ

ಕಾಯಕಯೋಗಿ ದಿನಪತ್ರಿಕೆಯ ಚಾಮರಾಜನಗರ ಜಿಲ್ಲಾ ವರದಿಗಾರರಾಗಿ ಬಿ.ಆರ್.ವಿಶ್ವನಾಥ್ ಅವರನ್ನು ನೇಮಕಗೊಳಿಸಲಾಗಿದೆ. ನಮ್ಮೆಲ್ಲಾ ಓದುಗರು, ಅಧಿಕಾರಿವರ್ಗ, ಜನಪ್ರತಿನಿಧಿಗಳು, ಸಂಘ ಸಂಸ್ಥೆ ಮುಖಂಡರು, ಸುದ್ದಿ ಹಾಗೂ ಜಾಹೀರಾತುಗಳಿಗೆ ವಿಶ್ವನಾಥ್ ಅವರನ್ನು ಸಂಪರ್ಕಿಸಲು ಕೋರಲಾಗಿದೆ.



ವಿಶ್ವನಾಥ್ ಬಿ.ಆರ್.
ಮೊ : 9986638679

–ಸಂಪಾದಕಿ.

## ಡಾ.ಬಾಬು ಜಗಜೀವನರಾಂ ಪುಣ್ಯತಿಥಿ

ಮಂಡ್ಯ : ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಂ ರವರ 35ನೇ ಪುಣ್ಯ ತಿಥಿಯನ್ನು ಜು.6 ರಂದು ಜಿಲ್ಲಾಧಿಕಾರಿ ಕಛೇರಿ ಮುಂಭಾಗದ ಕಾವೇರಿ ಉದ್ಯಾನವನದಲ್ಲಿರುವ ಅವರ ಪ್ರತಿಮೆಗೆ ಬೆಳಿಗ್ಗೆ 10 ಗಂಟೆಗೆ ಮಾಲಾರ್ಪಣೆ ಮಾಡುವ ಮೂಲಕ ಆಚರಿಸಲಾಗುತ್ತದೆ.

## 'ಅಪ್ಪ ಅಂಬಾರಿ ಹೊತ್ತ ಎಂದು ಮರಿಯಾನೆಗೂ ಕೊಡಲಾಗದು': ಸರ್ಕಾರದ ವಿರುದ್ಧ ಸೈನಿಕ ಕಿಡಿ

ಮೈಸೂರು: ಸಚಿವ ಸಿಪಿ ಯೋಗೇಶ್ವರ್ ಅವರು ಸರ್ಕಾರದ ವಿರುದ್ಧ ಬಹಿರಂಗವಾಗಿ ಹೇಳಿಕೆ ನೀಡುವ ಮೂಲಕ ಹೊಸ ಬಾಂಬ್ ಸಿಡಿಸಿದ್ದಾರೆ. ಮುಖ್ಯಮಂತ್ರಿ ಹುದ್ದೆ ವೈಭವಕ್ಕೆ ಆಗುವುದಲ್ಲ. ಅಂಬಾರಿ ಹೊರಲು ಯಾವ ಆನೆ ಸೂಕ್ತ ಎಂಬುದು ಮುಖ್ಯ ಎಂದು ಹೇಳುವ ಮೂಲಕ ಸರ್ಕಾರದ ವಿರುದ್ಧ ಆಕ್ರೋಶ ಹೊರಗೆಡಹಿದ್ದಾರೆ.

ನಗರದಲ್ಲಿ ಮಾತನಾಡಿರುವ ಯೋಗೇಶ್ವರ್ ಅವರು , ಸಿಎಂ ಎಂದರೆ ರಾಜ್ಯದ ಜನತೆ ಆಶೋತ್ತರಗಳಿಗೆ ಸ್ಪಂದಿಸಬೇಕು. ಸಿಎಂ ಬಹಳ ಸಂವೇದನಾ ಶೀಲರಾಗಿರಬೇಕು. ಅಂಬಾರಿ ಹೊರಬೇಕು ಎಂದರೆ ಯಾವ ಆನೆ ಸೂಕ್ತ, ಭಾರ ಹೊರಲು ಸಾಧ್ಯವೇ ಎಂಬುದನ್ನು ಯೋಚಿಸಿ ಆನೆ ಬದಲಿಸುತ್ತಾರೆ. ಹಾಗೇ ಬದಲಾವಣೆ ಎಂಬುದು ಜಗದ ನಿಯಮ ಎಂದು ಹೇಳುವ ಮೂಲಕ ಅಚ್ಚರಿ ಮೂಡಿಸಿದ್ದಾರೆ.



ಅಲ್ಲದೇ ಅಂಬಾರಿಯನ್ನು ಅರ್ಜುನ ಒಂದಷ್ಟು ವರ್ಷ ಹೊತ್ತ, ಅಭಿಮನ್ಯು ಹೊತ್ತ, ಬಲರಾಮ ಒಂದಷ್ಟು ವರ್ಷ ಹೊತ್ತ ಹೀಗಂತ ಅದರ ಮರಿಯಾನೆಗೂ ಅಂಬಾನಿ ಹೊರಲು ಅವಕಾಶ ಕೊಡಲು ಆಗಲ್ಲ. ಅಪ್ಪ ಹೊತ್ತಿದ್ದಾನೆ ಎಂದು ಮರಿಯಾನೆಗೂ ಅಂಬಾರಿ ಹೊರಿಸಲಾಗುತ್ತಾ. ಅದು ಸಾಧ್ಯವಿಲ್ಲ. ಬದಲಾವಣೆ ಪ್ರಕೃತಿ ಸಹಜ. ಮುಂದಿನ ದಿನಗಳಲ್ಲಿ ಕಾದು ನೋಡೋಣ ಎಂದು ಪರೋಕ್ಷವಾಗಿ ಬಿವೈ ವಿಜಯೇಂದ್ರೂ ಟಾಂಗ್ ಕೊಟ್ಟಿದ್ದಾರೆ.

ಅಲ್ಲದೇ ಇದು ನನ್ನ ಸರ್ಕಾರ ಅನ್ನುವ ಭಾವನೆ ನನಗೆ ಬರುತ್ತಿಲ್ಲ. ನನಗೆ ಆಗುತ್ತಿರುವ ನೋವು, ಚಿತ್ರಹಿಂಸೆಯನ್ನು ಹೇಳುತ್ತಿದ್ದೇನೆ. ಅದರಲ್ಲಿ ಎಲ್ಲವನ್ನೂ ಹೇಳಲು ಸಾಧ್ಯವಿಲ್ಲ. ನಮ್ಮ ಸರ್ಕಾರವಿದ್ದರೂ, ವಿರೋಧಪಕ್ಷದವರ ಕೈ ಮೇಲಾಗುತ್ತಿದೆ. ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಮೀಸಲಾತಿ ಕೂಡ ಹೆಚ್.ಡಿ. ಕುಮಾರಸ್ವಾಮಿ ಹೇಳಿದಂತೆಯೇ ಆಗುತ್ತಿದೆ. ಸಾಕಷ್ಟು ಬಾರಿ ಹಿಂಸೆಯಾಗಿದೆ ಎಂದು ಹೇಳಿದ್ದಾರೆ.

ಈ ಸರ್ಕಾರದಲ್ಲಿ ಸಾಮಾಜಿಕ ನ್ಯಾಯ ಕೊಡಿಸಲು ಆಗುತ್ತಿಲ್ಲ. ರಾಜ್ಯದ ಜನತೆಗೆ ಸಾಮಾಜಿಕ ನ್ಯಾಯ ಕೊಡಿಸಲು ಆಗುತ್ತಿಲ್ಲ. ಡಿಕೆ ಶಿವಕುಮಾರ್, ಹೆಚ್.ಡಿ. ಕುಮಾರಸ್ವಾಮಿಯೊಂದಿಗೆ ಮುಖ್ಯಮಂತ್ರಿ ಹೊಂದಾಣಿಕೆ ಸದಾ ಇದೆ. ರಾಜ್ಯದಲ್ಲಿ ವಿರೋಧಪಕ್ಷಗಳು ಇಲ್ಲವೆಂದು ಎಂದು ಸಿಪಿ ಯೋಗೇಶ್ವರ್ ಅವರು ಇದೇ ವೇಳೆ ತಮ್ಮ ಬೇಸರವನ್ನು ಹೊರಗೆಡಹಿದ್ದಾರೆ.

ಕ್ರಾಂತಿಯಕಿಡಿ
ಕಾಯಕಯೋಗಿ
KAYAKAYOGI-MORNING DAILY ಕನ್ನಡ ದಿನಪತ್ರಿಕೆ
ಪುಟ–04
ಮಂಗಳವಾರ
06 ಜುಲೈ 2021


ಮಹಾಲಕ್ಷ್ಮಿ.ಕೆ, ಅಧ್ಯಕ್ಷರು.


ಶಿವಮೂರ್ತಿ, ಉಪಾಧ್ಯಕ್ಷರು.

## ಕೊರೋನಾ ವಿರುದ್ಧ ಜನಜಾಗೃತಿ

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ಸರ್ಕಾರದ ನಿಯಮಾವಳಿಗಳಂತೆ ಕೋವಿಡ್–19 ನಿಯಂತ್ರಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ.


ಎನ್.ಕೆ.ಶಶಿಕುಮಾರ್, ಪಿಡಿಒ.

**ಆರೋಗ್ಯದಿಂದಿರಿ–ಸುರಕ್ಷಿತವಾಗಿರಿ, ನಾವೆಲ್ಲೂರು ಒಟ್ಟಾಗಿ ಕೊರೋನಾ ವಿರುದ್ಧ ಹೋರಾಡೋಣ.**

# ಕೋವಿಡ್ ವಿರುದ್ದ ಟಿ.ಎಂ.ಹೊಸೂರು ಗ್ರಾ.ಪಂ. ಕ್ರಮ

## ಸಮರೋಪಾದಿಯಲ್ಲಿ ಮುಂಜಾಗೃತ ಕ್ರಮ : ಗ್ರಾಮ ಸ್ವಚ್ಚತೆಗೆ ಆಧ್ಯತೆ : ಅಧ್ಯಕ್ಷರು–ಸದಸ್ಯರಿಂದ ಜನಜಾಗೃತಿ

ಮಂಡ್ಯ : ಶ್ರೀರಂಗಪಟ್ಟಣ ತಾಲೂಕಿನ ಟಿ.ಎಂ.ಹೊಸೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಮಹಾಮಾರಿ ಕೋವಿಡ್–19 2ನೇ ಅಲೆ ವಿರುದ್ದ ಸಮರೋಪಾದಿಯಲ್ಲಿ ಮುಂಜಾಗೃತ ಕ್ರಮ ಕೈಗೊಳ್ಳಲಾಗಿದೆ.

ಪಂಚಾಯಿತಿ ಅಧ್ಯಕ್ಷರು ಹಾಗೂ ಸದಸ್ಯರ ಮಾರ್ಗದರ್ಶನದಲ್ಲಿ ಪಂಚಾಯಿತಿ ಪಿಡಿಒ ಮತ್ತು ಸಿಬ್ಬಂದಿಗಳು ಗ್ರಾಮದ ಜನತೆಗೆ ಸ್ಯಾನಿಟೈಸರ್, ಮಾಸ್ಕ್ ವಿತರಿಸುವುದರ ಜೊತೆಗೆ ಚರಂಡಿ, ಕುಡಿಯುವ ನೀರಿನ ಟ್ಯಾಂಕ್ ಸ್ವಚ್ಚತೆಗೆ ಆಧ್ಯತೆ ನೀಡಿದ್ದಾರೆ.

ಕೋವಿಡ್–19 ಸಾಂಕ್ರಾಮಿಕರೋಗವಾಗಿದ್ದು, ನಿಯಂತ್ರಣಕ್ಕಾಗಿ ಗ್ರಾಮಮಟ್ಟದಲ್ಲಿ ಲಾಕ್‌ಡೌನ್ ಜಾರಿಗೊಳಿಸಿರುವ ಬಗ್ಗೆ, ಸಾಮಾಜಿಕ ಅಂತರ ಅನುಸರಿಸುತ್ತಿರುವ ಬಗ್ಗೆ, ವಿದೇಶದಿಂದ ಮತ್ತು ಬೇರೆ ರಾಜ್ಯದಿಂದ ಬಂದಿರುವವರನ್ನು ಕ್ವಾರಂಟೈನ್‌ನಲ್ಲಿ ಇರಿಸಿರುವ ಬಗ್ಗೆ, ಕೂಲಿ ಮಾಡುವವರಿಗೆ ಮತ್ತು ನಿರ್ಗತಿಕರಿಗೆ ಆಹಾರವನ್ನು ವಿತರಣೆ ಮಾಡುತ್ತಿರುವ ಬಗ್ಗೆ ಮತ್ತು ಅಗತ್ಯ ವಸ್ತುಗಳ ಪೂರೈಕೆ ಮಾಡಲಾಗಿದೆ.

ಸರ್ಕಾರದ ಘೋಷಣೆಯಂತೆ ಗ್ರಾ.ಪಂ. ವ್ಯಾಪ್ತಿಯಲ್ಲಿ ಲಾಕ್‌ಡೌನ್ ನಿಯಮಾವಳಿಗಳನ್ನು ಕಡ್ಡಾಯವಾಗಿ ಜಾರಿಗೆ ತರಲಾಗಿದ್ದು ಜನರಲ್ಲಿ ಮಹಾಮಾರಿ ಕರೋನಾ ವಿರುದ್ಧ ಹೋರಾಡಬೇಕಾದ ಅವಶ್ಯಕತೆ ಮತ್ತು ಮುಂಜಾಗೃತ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಲಾಗಿದೆ. ಜನತಾ ಕರ್ಫ್ಯೂ ಯಶಸ್ವಿಯಾಗಿ ಆಚರಿಸಲಾಗಿದೆ.

ಕರೋನಾ ವಿರುದ್ಧ ಹೋರಾಡುತ್ತಿರುವ ವೈಧ್ಯಕೀಯ ಸಿಬ್ಬಂದಿಗಳು, ಪೋಲಿಸ್ ಇಲಾಖೆ ಮತ್ತು ಪೌರಕಾರ್ಮಿಕರಿಗೆ ಧನ್ಯವಾದಗಳನ್ನು ತಿಳಿಸುವ ಸಲುವಾಗಿ ಮಾಸ್ಕ್, ಔಷಧಿ ಹಾಗೂ ಆಹಾರ ಕಿಟ್‌ಗಳನ್ನು ನೀಡಲಾಗಿದೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಜಾರಿಗೆ ತಂದಿರುವ ಲಾಕ್ ಡೌನ್ ನಿಯಮಾವಳಿಗಳನ್ನು ಸಾರ್ವಜನಿಕರು ಪಾಲಿಸುವಂತೆ ಅರಿವು ಮೂಡಿಸಲಾಗಿದೆ.

ಕರ್ನಾಟಕ ಸರ್ಕಾರ ಕೋವಿ ಡ್–19 ನಿಯಂತ್ರಣಕ್ಕಾಗಿ ನೀಡುವ ಎಲ್ಲಾ ಸೂಚನೆಗಳನ್ನು ಹಾಗೂ ಜಿಲ್ಲಾಡಳಿತ ಮತ್ತು ತಾಲ್ಲೂಕು ಆಡಳಿತ ನೀಡುವ ಎಲ್ಲಾ ಸೂಚನೆಗಳನ್ನು ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಸಾರ್ವಜನಿಕರು ಪಾಲಿಸಿ ಕ್ರಮವಹಿಸಲಾಗುತ್ತಿದೆ.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕೋವಿಡ್–19 ಫ್ಲೈಯಿಂಗ್ ಸ್ಕ್ವಾರ್ಡ್‌ಗಳ ತಂಡವನ್ನು ರಚಿಸಿ, ಈಗಾಗಲೇ HOME QUARANTINE ನಲ್ಲಿ ಇರುವ ವ್ಯಕ್ತಿಗಳ ಮೇಲೆ ತೀವ್ರ ನಿಗಾವಹಿಸಿ ಸಾರ್ವಜನಿಕ ಆರೋಗ್ಯದ ದೃಷ್ಠಿ ಮತ್ತು ಸಾಂಕ್ರಾಮಿಕರೋಗ ತಡೆಗಟ್ಟುವ



ನಿಟ್ಟಿನಲ್ಲಿ ಸಾಮಾಜಿಕಅಂತರ ಕಾಯ್ದು ಕೊಳ್ಳುವ (Social Distancing) ಬಗ್ಗೆ ಪರಿಣಾಮಕಾರಿ ಕ್ರಮಗಳನ್ನು ಅನುಷ್ಠಾನಗೊಳಿಸಲು ಸಾರ್ವಜನಿಕರಿಗೆ ಮಾಹಿತಿ ನೀಡಿ ಅಗತ್ಯ ಕ್ರಮ ವಹಿಸಲು ಸೂಚಿಸಿದೆ.

ಜಿಲ್ಲಾಧಿಕಾರಿಗಳ ಆದೇಶದಂತೆ, ಕೋವಿಡ್–19 (ಕೊರೊನಾ ವೈರಸ್) ಸಾಂಕ್ರಾಮಿಕರೋಗ ಹರಡದಂತೆ ಮುಂಜಾಗ್ರತ ಕ್ರಮ ಕೈಗೊಂಡು ಜನರಿಗೆ ಅಗತ್ಯ ಸೇವೆ ನೀಡಲು ಹಾಗೂ ಕುಡಿಯುವ ನೀರು, ನೈರ್ಮಲ್ಯತೆ ದೃಷ್ಠಿಯಿಂದ ಅಗತ್ಯ ಕ್ರಮ ವಹಿಸಲಾಗಿದೆ.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ದ್ವಿತೀಯದರ್ಜೆ ಲೆಕ್ಕ ಸಹಾಯ ಕರುಗಳು, ಬಿಲ್ ಕಲೆಕ್ಟರ್‌ಗಳು, ಡಾಟಾ ಎಂಟ್ರಿ ಆಪರೇಟರ್‌ಗಳು, ವಾಟರ್‌ಮನ್‌ಗಳು, ಸ್ವಚ್ಛತಾಗಾ ರರು ನೌಕರರುಗಳು 24*7 ಕೇಂದ್ರ ಸ್ಥಾನದಲ್ಲಿ ಇದ್ದು ಕರ್ತವ್ಯ ನಿರ್ವಹಿಸಲು ಸೂಚಿಸಿ, ಸಾರ್ವಜನಿಕರಿಗೆ ಅಗತ್ಯ ಸೇವೆಯನ್ನು ಒದಗಿಸಿ ಕೋವಿಡ್–19 (ಕೊರೊನಾ ವೈರಸ್) ಹರಡ ದಂತೆ ಹೆಚ್ಚಿನ ಮಾಹಿತಿ ನೀಡುವಂತೆ ತಿಳಿಸಿದೆ.

ಗ್ರಾಮ ಪಂಚಾಯಿತಿಯ ಗ್ರಾಮಗಳಲ್ಲಿಯೇ ಜನ ಸಾಮಾನ್ಯರಿಗೆ ಬೇಕಾಗುವಂತಹ ಸೊಪ್ಪು–ತರಕಾರಿಗಳನ್ನು ಗ್ರಾಮದ ಒಳಗಡೆಯಲ್ಲಿಯೇ ಮಾರಾಟ ಮಾಡುವಂತೆ ಕ್ರಮ ವಹಿಸುವುದು ಹಾಗು ಗ್ರಾಮೀಣ ಕೊರೋನಾ ನಿಯಂತ್ರಣ : ಗ್ರಾ.ಪಂ. ವ್ಯಾಪ್ತಿಯ ಗ್ರಾಮಗಳಲ್ಲಿ ಕೋವಿಡ್ ನಿಯಂತ್ರಿಸಲು ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಅಗತ್ಯ ಕ್ರಮ ಕೈಗೊಳ್ಳಲಾಗಿದೆ.

ಈ ಭಾಗದಲ್ಲಿ ಬೆಳೆದಿರುವಂತಹ ತರಕಾರಿಗಳನ್ನು ಅಲ್ಲಿಯೇ ಸ್ಥಳೀಯವಾಗಿ ಮಾರಾಟ ಮಾಡಲು ಮತ್ತು ರೈತ ಸಮುದಾಯಕ್ಕೆ ಅನುಕೂಲ ವಾಗುವಂತೆ ಕ್ರಮವಹಿಸಲು ತಿಳಿಸಲಾಗಿದೆ.

ಪಂಚಾಯಿತಿ ವ್ಯಾಪ್ತಿಯಲ್ಲಿ ಜನ ಸಾಮಾನ್ಯರಿಗೆ ಅಗತ್ಯವಾಗಿ ಬೇಕಾಗುವ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಕಲ್ಪಿಸುವುದು. ಗ್ರಾಮೀಣ ಪ್ರದೇಶದಲ್ಲಿ ಎಲ್ಲಾ ಅಂಗಡಿ ಮತ್ತು ಟೀ ಸ್ಟಾಲ್‌ಗಳನ್ನು ಸಂದರ್ಭನುಸಾರವಾಗಿ ಮುಚ್ಚು ವಂತೆ ಅಗತ್ಯ ಕ್ರಮ ವಹಿಸಲಾಗಿದೆ.

ಗ್ರಾಮಗಳಲ್ಲಿ ಗ್ರಾಮ ಮಟ್ಟದಕಾರ್ಯಪಡೆ (Village Taskforce) ಸಮಿತಿಯನ್ನು ರಚಿಸುವುದು ಹಾಗೂ ಕಾರ್ಯಪ್ರವೃತ್ತರಾಗುವುದು. ನಿರ್ಗತಿಕರಿಗೆ ಹಾಗೂ ಆಹಾರ ಅವಶ್ಯಕವಾಗಿರುವವರಿಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮೂಲಕ ಆಹಾರ ವಿತರಿಸಲು ಅಗತ್ಯಕ್ರಮವಹಿಸಲಾಗಿದೆ. ರೈತರು ಬೆಳೆದ ಹಣ್ಣು, ತರಕಾರಿಗಳನ್ನು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಜನರಿಗೆ ಅಗತ್ಯ ಇರುವಷ್ಟು ಗ್ರಾಮ ಪಂಚಾಯಿತಿ ವತಿಯಿಂದ ಖರೀದಿಸಿ ಜನರಿಗೆ ಮನೆ ಮನೆಗಳಿಗೆ ವಿತರಿಸಲು ಅಗತ್ಯ ಕ್ರಮವಹಿಸಲಾಗಿದೆ.

ಪ್ರತಿ ಗ್ರಾಮದಲ್ಲಿ ಯುವಕರ ತಂಡ ಮಾಡಿ, ತಂಡಕ್ಕೆ ಅಗತ್ಯ ಸೇವೆಗಳನ್ನು ಒದಗಿಸಲು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕ್ರಮ ಕೈಗೊಂಡಿದ್ದು ಕೋವಿಡ್–19 ನಿರ್ಮೂಲನೆಗಾಗಿ ಅತ್ಯಂತ ಜಾಗರೂಕತೆಯಿಂದ ಕಾರ್ಯನಿರ್ವಹಿಸಲಾಗುತ್ತಿದೆ.

## ಗ್ರಾ.ಪಂ.ವ್ಯಾಪ್ತಿಯ ಹಳ್ಳಿಗಳಲ್ಲಿ ಕೋವಿಡ್–19 ಜನಜಾಗೃತಿ

- ಕೋವೀಡ್‌ಕಾರ್ಯಪಡೆಯ ಸದಸ್ಯರುಗಳ ಸಭೆ.
- ಸೋಂಕಿತರ ಮನೆಗಳಿಗೆ ಸ್ಯಾನೀಟೈಜರ್
- ಸಾರ್ವಜನಿಕ ಸ್ಥಳಗಳಲ್ಲಿ ಸ್ಯಾನೀಟೈಜರ್
- ಲಾಕ್‌ಡೌನ್ ಬಗ್ಗೆ ಸಾರ್ವಜನಿಕರಿಗೆ ಅರಿವು
- ಹೋಂ ಐಸೋಲೇಷನ್ ಮನೆಗೆ ಭೇಟಿ
- ಅಂಗನವಾಡಿ ಕೇಂದ್ರಕ್ಕೆ ಸ್ಯಾನೀಟೈಜರ್
- ಹೋಟೇಲ್ ಮತ್ತು ಅಂಗಡಿಗಳಿಗೆ ನೋಟೀಸ್
- ಕೋವೀಡ್ ಕಾರ್ಯಪಡೆ ಸದಸ್ಯರುಗಳ ಸಭೆ
- ಆಹಾರಕೀಟ್ ಹಾಗೂ ಸುರಕ್ಷಿತಾ ಕಿಟ್ ವಿತರಣೆ
- ಮಾಸ್ಕ್ – ಸ್ಯಾನಿಟೈಸರ್ ವಿತರಣೆ







**ಮನೆಯಲ್ಲಿಯೇ ಇರಿ ಸುರಕ್ಷಿತವಾಗಿರಿ**

ಕರ್ನಾಟಕ ಸರ್ಕಾರ ತಾಲ್ಲೂಕು ಪಂಚಾಯತ್ ಶ್ರೀರಂಗಪಟ್ಟಣ, ಜಿಲ್ಲಾ ಪಂಚಾಯತ್, ಮಂಡ್ಯ.
ಟಿ.ಎಂ.ಹೊಸೂರು ಗ್ರಾಮ ಪಂಚಾಯಿತಿ ಕಾರ್ಯಾಲಯ.




Published and Owned by : Smt ARUNA JYOTHI.B.K. From No. 292, Basaveshwara Nilaya, Basaveshwara Maarga,Kaveri Nagar, Mandya Printed by : PUTTASWAMY,9th Cross, Vinoba Road,Subash Nagar, Mandya-571401, Mandya Dist. Karnataka. Editor : ARUNA JYOTHI.B.K.